ಸಂಪಾದಕರು: ರವಿಕುಮಾರ್ ಸಿ.ಹೆಚ್.
ಓದುಗರ ನೆಚ್ಚಿನ ಕನ್ನಡ ದಿನಪತ್ರಿಕೆ

# ಸೂರ್ಯ ಪ್ರಗತಿ

SURYAPRAGATHI Kannada Daily
ಪ್ರತಿ ಸುದ್ಧಿಯ ಧ್ವನಿ
suryapragathi2021@gmail.com Mob: 9901010109 RNI:KARKAN/2021/80805 L2/RNP-1285/TMR/2025-27

Volume: 05 ಸಂಪುಟ: 05 | Issue:71 ಸಂಚಿಕೆ: 71 | Date:28-03-2026 Saturday | RNI NO : KARKAN/2021/80805 | L2/RNP-1285/TMR/2025-27 | Page:4 ಪುಟ : 4 | Price: 1.00 ಬೆಲೆ: 1.00 ರೂ

## ಅರಣ್ಯ ಇಲಾಖೆ ಹೆಸರಲ್ಲಿ 15 ಯುವಕರಿಗೆ ನಕಲಿ ನೇಮಕಾತಿ ಆದೇಶ ಪತ್ರ

### ನಕಲಿ ತರಬೇತಿ ಕೇಂದ್ರ: ಖದೀಮರ ಸೆಟ್ ಅಪ್ ಕಂಡು ಗಾಬರಿಗೊಂಡ ಅಧಿಕಾರಿಗಳು: ಪ್ರಭಾವಿ ವ್ಯಕ್ತಿ ತೋಟದ ಮನೆ ಬಾಡಿಗೆ ಪಡೆದು ಕೃತ್ಯ

ತುಮಕೂರಿನಲ್ಲಿ ಅರಣ್ಯ ಇಲಾಖೆ ನೇಮಕಾತಿ ಹೆಸರಿನಲ್ಲಿ ನಕಲಿ ತರಬೇತಿ ಕೇಂದ್ರ ಪತ್ತೆಯಾಗಿದೆ. ಖದೀಮರ ತಂಡವು ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿಯ ನಕಲಿ ಲೆಟರ್‌ಹೆಡ್ ಮತ್ತು ಲೋಗೋ ಬಳಸಿ ಯುವಕರನ್ನು ವಂಚಿಸಿದೆ. 15 ಯುವಕರಿಗೆ ನಕಲಿ ನೇಮಕಾತಿ ಆದೇಶ ಪತ್ರಗಳನ್ನೂ ನೀಡಿದ್ದು, ಸ್ಥಳೀಯರ ಮಾಹಿತಿ ಮೇರೆಗೆ ಅಧಿಕಾರಿಗಳು ದಾಳಿ ನಡೆಸಿ ಜಾಲವನ್ನು ಭೇದಿಸಿದ್ದಾರೆ. ಈ ಬಗ್ಗೆ ಅರಣ್ಯ ಇಲಾಖೆ ಪೊಲೀಸರಿಗೆ ದೂರು ನೀಡಿದೆ.

ತುಮಕೂರು, ಮಾರ್ಚ್ 27: ಅರಣ್ಯ ಇಲಾಖೆ ನೇಮಕಾತಿ ಹೆಸರಲ್ಲಿ ನಕಲಿ ತರಬೇತಿ ಕೇಂದ್ರ ನಡೆಸುತ್ತಿದ್ದ ಜಾಲವೊಂದು ತುಮಕೂರಿನಲ್ಲಿ ಪತ್ತೆಯಾಗಿದೆ. ಬೆಳಗಾವಿ, ಬಾಗಲಕೋಟೆ ಸೇರಿದಂತೆ ಉತ್ತರ ಕರ್ನಾಟಕದ ಕೆಲ ಜಿಲ್ಲೆಗಳ 15 ಯುವಕರ ಕರೆತಂದಿದ್ದ ತಂಡ, ಇವರನ್ನು ಮೈಸೂರು ವಿಭಾಗದ ಅರಣ್ಯ ಇಲಾಖೆಯ ವಿವಿಧ ಹಂತಗಳ ಸೇವೆಗೆ ನೇಮಕಾತಿ ಪ್ರಕ್ರಿಯೆಯಲ್ಲಿ ಕೆಲಸದ ಆದೇಶ ಸಿಕ್ಕಿರುವ ರೀತಿ ನಂಬಿಸಿತ್ತು. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮೀನಾಕ್ಷಿ ನೇಗಿಯವರ ಲೆಟರ್ ಹೆಡ್, ಅರಣ್ಯ ಇಲಾಖೆಯ ಲೋಗೊ ಸೇರಿದಂತೆ ಪ್ರಧಾನ ಕಾರ್ಯದರ್ಶಿ ಸಹಿ ಹಾಗೂ ಸೀಲ್ ನ ನಕಲು ಮಾಡಿದ್ದ ಖದೀಮರು, ನೇಮಕಾತಿ ಆದೇಶ



ಪತ್ರಗಳನ್ನು ಯುವಕರಿಗೆ ವಾಟ್ಸ್ ಆಪ್ ಮುಖಾಂತರ ಕಳುಹಿಸಿದ್ದರು ಎಂಬುದು ಬಯಲಾಗಿದೆ.

ತುಮಕೂರು ತಾಲೂಕಿನ ವಡ್ಡರಹಳ್ಳಿಯ ಪ್ರಭಾವಿ ವ್ಯಕ್ತಿ ವಾಲೆ ಚಂದ್ರರವರ ಪುತ್ರನ ತೋಟದ ಮನೆಯನ್ನು ಬಾಡಿಗೆ ಪಡೆದ ಗ್ಯಾಂಗ್ ಈ ರೀತಿಯ ಕೃತ್ಯ ಎಸಗಿದ್ದು, ಆರಂಭದಲ್ಲೇ ವಿಚಾರ ಬೆಳಕಿಗೆ ಬಂದಿದೆ. ತಿಂಗಳಿಗೆ 30 ಸಾವಿರ ಬಾಡಿಗೆಯಂತೆ ಮಾತನಾಡಿದ್ದ ಕೆಲವೇ ದಿನದಲ್ಲಿ ತೋಟದ ಮನೆಯಲ್ಲಿ ನಾನಾ ಬದಲಾವಣೆಯಾಗಿದ್ದವು. ಗೋಡೆಗಳಿಗೆ ಬಳಿದ ಬಣ್ಣ, ಬೋರ್ಡ್, ಅಪರಿಚಿತ 15 ಯುವಕರ ವಾಸ ಅನುಮಾನ ಮೂಡಿಸಿದ್ದ ಕಾರಣ, ತೋಟದ ಮಾಲೀಕ ಹಾಗೂ ಸ್ಥಳೀಯರು ಅರಣ್ಯ ಇಲಾಖೆ ಅಧಿಕಾರಿಗಳಿಗೆ ಈ ಬಗ್ಗೆ ಮಾಹಿತಿ ನೀಡಿದ್ದಾರೆ. ಹೀಗಾಗಿ ಸ್ಥಳ ಪರಿಶೀಲನೆಗೆ ಬಂದ ಅರಣ್ಯ ಅಧಿಕಾರಿಗಳೇ ಇವರ ಸೆಟ್ ಅಪ್ ಕಂಡು ಒಂದು ಕ್ಷಣ ದಂಗಾಗಿದ್ದಾರೆ. ವ್ಯವಸ್ಥಿತವಾಗಿ 15 ಯುವಕರ ಯಾಮಾರಿಸಿ ಹಣ ಪಡೆದ ಜೊತೆಗೆ ಇಲಾಖೆ ಹೆಸರು ಬಳಸಿಕೊಂಡು ತರಬೇತಿ ನೆಪದಲ್ಲಿ ಕರೆತಂದು ವಂಚಿಸಿರೋದು ಈ ವೇಳೆ ಗೊತ್ತಾಗಿದೆ. ಕೂಡಲೇ ಈ ಬಗ್ಗೆ ಪೊಲೀಸರಿಗೆ ಅರಣ್ಯ ಇಲಾಖೆ ಮಾಹಿತಿ ನೀಡಿದೆ.

ಇನ್ನು ಈ ವಂಚನೆ ಜಾಲದಲ್ಲಿ ತುಮಕೂರಿನ ನಮಸ್ತೆ ಕೆಫೆಯ ಪವನ್, ನೆಲಮಂಗಲದ ಕಿರಣ್ ಹಾಗೂ ವಿನಯ್ ಎಂಬ ಮೂವರ ಹೆಸರು ಕೇಳಿ ಬಂದಿದೆ. ಸದ್ಯ ಘಟನೆ ಸಂಬಂಧ ಅರಣ್ಯ ಇಲಾಖೆ ಅಧಿಕಾರಿಗಳು ತುಮಕೂರು ಗ್ರಾಮಾಂತರ ಪೊಲೀಸ್ ಠಾಣೆಗೆ ದೂರು ನೀಡಿದ್ದರೆ, ತರಬೇತಿಗೆಂದು ಬಂದಿದ್ದ ಯುವಕರು ಮೋಸ ಹೊದ ಬಗ್ಗೆ ತಿಳಿದು ಕಂಗಾಲಾಗಿ ಊರಿನತ್ತ ತೆರಳಿದ್ದಾರೆ. ಆದರೇ ಹೀಗೆ ವ್ಯವಸ್ಥಿತವಾಗಿ ಹಾಗೂ ಅಕ್ರಮವಾಗಿ ತರಬೇತಿ ಕೇಂದ್ರ ನಡೆಸುತಿದ್ದವರ ಹಿಂದೆ ಇರೋದ್ಯಾರು? ಯುವಕರು ವಂಚಕರ ಬಲೆಗೆ ಬಿದ್ದಿರೋದು ಹೇಗೆ? ಈ ರೀತಿಯ ಹಲವು ಪ್ರಶ್ನೆಗಳು ಮೂಡಿದ್ದು, ಪ್ರಕರಣದ ಮತ್ತಷ್ಟು ಮಾಹಿತಿ ಪೊಲೀಸರ ತನಿಖೆ ನಂತರವಷ್ಟೇ ತಿಳಿದು ಬರಬೇಕಿದೆ.

## ಕರ್ತವ್ಯ ಲೋಪ, ಅನುದಾನ ದುರುಪಯೋಗ : ಪಿಡಿಓಗಳಾದ ಶಿವಾನಂದ, ಭವ್ಯ ಅಮಾನತು

ಪಾವಗಡ: ತಾಲ್ಲೂಕಿನ ಪೊನ್ನಸಮುದ್ರ ಗ್ರಾ.ಪಂ. ಪಿಡಿಒ ಶಿವಾನಂದ ಸಾತಿಹಾಳ್ ಮತ್ತು ಕೋಟಗುಡ್ಡ ಗ್ರಾ.ಪಂ. ಪಿಡಿಒ ಭವ್ಯ.ಎ ಅವರನ್ನು ಅಮಾನತು ಮಾಡಿ ಜಿಲ್ಲಾ ಪಂಚಾಯಿತಿ ಮುಖ್ಯ ಕಾರ್ಯನಿರ್ವಾಹಣಾಧಿಕಾರಿ ಅಶ್ವಿಜ.ಬಿ.ವಿ ಅವರು ಆದೇಶ ಹೊರಡಿಸಿದ್ದಾರೆ.

ಇವರು ಈ ಹಿಂದೆ ಕೋಟಗುಡ್ಡ ಗ್ರಾಮ ಪಂಚಾಯಿತಿ ಪಿಡಿಓಗಳಾಗಿದ್ದ ಅವಧಿಯಲ್ಲಿ 15ನೇ ಹಣಕಾಸು ಯೋಜನೆಯಡಿ ನಿಗದಿತ ಉದ್ದೇಶದ ಬದಲಾಗಿ ಅನುದಾನ ದುರುಪಯೋಗ ಮಾಡಿಕೊಂಡು ಗ್ರಾಮ ಪಂಚಾಯಿತಿಯ ಮಾರ್ಗಸೂಚಿಗಳ ಉಲ್ಲಂಘನೆ ಮಾಡಿ ಕರ್ತವ್ಯ ಲೋಪವೆಸಗಿರುತ್ತಾರೆ.

ಬೆಸ್ಕಾಂ ಬಿಲ್, ಸ್ವಚ್ಛತೆಗಾರರ ವೇತನ ಪಾವತಿ, ಕಸ ವಿಲೇವಾರಿ ವಾಹನ ಇಂಧನ ಮತ್ತು ನಿರ್ವಹಣೆ, ಕಸ ಸಂಗ್ರಹಣಾ ಸಿಬ್ಬಂದಿ ಮತ್ತು ವಾಹನ ಚಾಲಕರ ವೇತನ ಹಾಗೂ ಪರಿಶಿಷ್ಟ ಜಾತಿ/ಪರಿಶಿಷ್ಟ ಪಂಗಡ ಮೀಸಲು ಅನುದಾನ, ಸಾಮಾಜಿಕ ಲೆಕ್ಕ ಪರಿಶೋಧನ ವೆಚ್ಚ ಹಾಗೂ ವಿಕಲಚೇತನರ ಅಭಿವೃದ್ಧಿಗೆ ಮೀಸಲಿಟ್ಟಿದ್ದ ಲಕ್ಷಾಂತರ ರೂಪಾಯಿ ಅನುದಾನವನ್ನು ನಿಗದಿತ ಉದ್ದೇಶಕ್ಕೆ ಬಳಸದೆ ಮಾರ್ಗಸೂಚಿಗಳಿಗೆ ವಿರುದ್ಧವಾಗಿ ಸಾಮಗ್ರಿ



ಖರೀದಿಸಿ ಅನುದಾನ ದುರುಪಯೋಗಪಡಿಸಿಕೊಳ್ಳಲಾಗಿದೆ.

ನವೆಂಬರ್ 2024 ರಿಂದ ಮಾರ್ಚ್ 2025 ರವರೆಗೆ ಪಂಚಾಯಿತಿಗೆ 09 ಸ್ಟಾಟರ್, 08 ಪಂಪ್ ಮತ್ತು 08 ಮೋಟಾರ್ ಗಳನ್ನು ಖರೀದಿಸಿದ್ದು ಹಳೆ ಸಾಮಗ್ರಿಗಳ ಯಾವುದೇ ಲೆಕ್ಕ ನೀಡಿಲ್ಲ. ದಾಸ್ತಾನು ಮತ್ತು ವಿತರಣಾ ವಹಿಯನ್ನು ನಿರ್ವಹಿಸಿಲ್ಲ. ಸಾಮಗ್ರಿ ಖರೀದಿ ವೇಳೆ ಪದೇ ಪದೇ ಒಂದೇ ಸಂಸ್ಥೆಗೆ ಆದ್ಯತೆ ನೀಡುವ ಮೂಲಕ ಪಾರದರ್ಶಕ ನಿಯಮಗಳನ್ನು ಉಲ್ಲಂಘನೆ ಮಾಡಲಾಗಿದೆ ಹಾಗೂ ಸರ್ಕಾರಕ್ಕೆ ಪಾವತಿಸಬೇಕಾದ ತೆರಿಗೆಗಳನ್ನು ಕಟಾಯಿಸದೆ ನಷ್ಟ ಉಂಟು ಮಾಡಲಾಗಿದೆ.

2025–26ನೇ ಸಾಲಿನ ರೂ.19.05 ಲಕ್ಷ ವೆಚ್ಚಕ್ಕೆ ಸಂಬಂಧಿಸಿದ ನಗದು ಪುಸ್ತಕ, ವೋಚರ್ ಮತ್ತು ಕ್ರಿಯಾಯೋಜನೆಗಳನ್ನು ತನಿಖಾಧಿಕಾರಿಗಳಿಗೆ ಹಾಜರುಪಡಿಸದೆ ಅಶಿಸ್ತು ತೋರಿರುತ್ತಾರೆ.

ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 10(1)ರ(ಡಿ)ರಂತೆ ಪ್ರದತ್ತವಾದ ಅಧಿಕಾರವನ್ನು ಚಲಾಯಿಸಿರುವ ಸಿಇಒ ಅವರು ಇಲಾಖಾ ವಿಚಾರಣೆ ಬಾಕಿ ಇರಿಸಿ ಈ ಇಬ್ಬರೂ ಅಧಿಕಾರಿಗಳನ್ನು ಸೇವೆಯಿಂದ ತಕ್ಷಣದಿಂದ ಜಾರಿಗೆ ಬರುವಂತೆ ಅಮಾನತ್ತಿನಲ್ಲಿರಿಸಿ ಆದೇಶಿಸಿದ್ದಾರೆ.

ಅಮಾನತ್ತಿನ ಅವಧಿಯಲ್ಲಿ ನೌಕರರು ಸಕ್ಷಮ ಪ್ರಾಧಿಕಾರಿಯವರ ಲಿಖಿತ ಅನುಮತಿ ಇಲ್ಲದೆ ಕೇಂದ್ರ ಸ್ಥಾನ ಬಿಡತಕ್ಕದ್ದಲ್ಲ ಎಂದು ಕಟ್ಟುನಿಟ್ಟಿನ ಸೂಚನೆ ನೀಡಿದ್ದಾರೆ.

## "ಜಮಿನು ಮಾರಾಟ ಮಾಡಬಾರದು ಅಪರ ಜಿಲ್ಲಾಧಿಕಾರಿ. ಡಾ.ಎನ್.ತಿಪ್ಪೇಸ್ವಾಮಿ ರೈತರಿಗೆ ಕಿವಿಮಾತು

ತಿಪಟೂರು: ಜನರು ಜಿಲ್ಲಾ ಕೇಂದ್ರಕ್ಕೆ ಬಂದು ತಮ್ಮ ತಮ್ಮ ಸಮಸ್ಯೆಗಳನ್ನು ಹೇಳಿಕೊಳ್ಳುವುದು ಕಷ್ಟವಾಗುತ್ತದೆ. ಎಂಬ ನಿಟ್ಟಿನಿಂದ ತಾಲೂಕು ಮಟ್ಟದಲ್ಲಿ ಜನಸಂಪರ್ಕ ಸಭೆಗಳನ್ನು ಆಯೋಜಿಸಲಾಗುತ್ತಿದ್ದು ಇಲ್ಲಿ ಸ್ವೀಕೃತವಾಗುವ ಎಲ್ಲ ಅರ್ಜಿಗಳನ್ನು ಒಂದು ಪ್ರತ್ಯೇಕವಾದ ಆನ್‌ಲೈನ್ ಪೋರ್ಟಲ್‌ಗೆ ಫೀಡ್ ಮಾಡಿ ಅರ್ಜಿಗಳಲ್ಲಿ ತಮ್ಮ ಸಮಸ್ಯೆಗಳನ್ನು ಬರೆದಿರುವ ಜನರ ಸಮಸ್ಯೆ ಬಗೆಹರಿಯುವುದು ಯಾವ ಹಂತದಲ್ಲಿದೆ ಎಂಬುದನ್ನು ತಿಳಿದುಕೊಳ್ಳಬಹುದಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಡಾ.ಎನ್. ತಿಪ್ಪೇಸ್ವಾಮಿ ರೈತರಿಗೆ ತಿಳಿಸಿದರು.

ನಗರದ ತಾಲೂಕು ಕಛೇರಿಯ ಅವರಣದಲ್ಲಿ ನಡೆದ ಜನಸಂಪರ್ಕ ಸಭೆಯಲ್ಲಿ ಮಾತನಾಡಿದ ಅವರು, ಸರ್ಕಾರದ ನಿರ್ದೇಶನದನ್ವಯ ಜಿಲ್ಲಾಧಿಕಾರಿಗಳಾದ ಶುಭಕಲ್ಯಾಣ್ ಜಿಲ್ಲಾಧಿಕಾರಿಗಳ ನಡೆ ತಾಲೂಕುಗಳ ಕಡೆ–ಜನ ಸಂಪರ್ಕ ಸಭೆಯನ್ನು ತುಮಕೂರು ಜಿಲ್ಲೆಯ ಎಲ್ಲ ತಾಲೂಕು ಕೇಂದ್ರಗಳು ಹಾಗೂ ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ನಡೆಸಿದ್ದಾರೆ.

ತಿಪಟೂರಿನಲ್ಲಿ ನಡೆದ ಜನಸಂಪರ್ಕ ಸಭೆಯಲ್ಲಿ ಜಿಲ್ಲಾಧಿಕಾರಿ ಡಾ.ಎನ್. ತಿಪ್ಪೇಸ್ವಾಮಿ ಸಾರ್ವಜನಿಕರಿಂದ ಮನವಿ ಸ್ವೀಕರಿಸಿದರು. ಒಂಬತ್ತನೆಯದಾಗಿದೆ. ಆಯೋಜಿಸುತ್ತಿದ್ದು ತಿಪಟೂರಿನ ಸಭೆ ಜನಸಂಖ್ಯೆ ಹೆಚ್ಚಾದಂತೆಲ್ಲಾ ಈಗ ಭೂಮಿಯ ಲಭ್ಯತೆ ಕಡಿಮೆಯಾಗಿದೆ. ರೈತರು ಸಾಧ್ಯವಾದಷ್ಟು ಮಟ್ಟಿಗೆ ನಿಮ್ಮಲ್ಲಿರುವ ಭೂಮಿಯನ್ನು ಮಾರದೇ ಉಳಿಸಿಕೊಳ್ಳಿ. ಕಳೆದುಕೊಳ್ಳಬೇಡಿ.

ಚಿಕ್ಕ – ಚಿಕ್ಕ ಸಮಸ್ಯೆಗಳಿಗೆ ನಿಮ್ಮಲ್ಲಿವ ಭೂಮಿಯನ್ನು ಮಾರಿದರೆ ಮುಂದೆ ಹಣ ಉಳಿಯುವುದಿಲ್ಲ, ಬೇಕೆಂದಾಗ ಭೂಮಿ ಸಿಗುವುದಿಲ್ಲ, ಭೂಮಿ ಇದ್ದರೆ ನಿಮ್ಮ ಮಕ್ಕಳು ಮೊಮ್ಮಕ್ಕಳ ಅಸ್ತಿತ್ವ ಇರುತ್ತದೆ ಎಂದರು ರೈತರು ತಮ್ಮ ತಮ್ಮಲ್ಲಿ ಇರುವ ಭೂಮಿಯನ್ನು ರಕ್ಷಣೆ ಮಾಡಿಕೊಳ್ಳಬೇಕು ಎಂದು ರೈತರಿಗೆ ಸೂಚಿಸಿದರು.



ರೈತರು ತಮ್ಮ ಜಮೀನಿನ ದಾಖಲೆಗಳನ್ನು 6. ತಿಂಗಳಿಗೊಮ್ಮೆ ಪರಿಶೀಲಿಸುತ್ತಿರಬೇಕು. ಅಥವ 1.ವರ್ಷಕ್ಕೆ ಒಮ್ಮೆಯಾದರೂ ಪಹಣಿ ಪಡೆದು ಕೊಂಡು ಪರೀಕ್ಷಿಸಬೇಕು. ಪಹಣಿಯಲ್ಲಿರುವ ಹೆಸರಿನವರು ಮೃತ ಪಟ್ಟರೆ. ನಂತರದ ವಾರಸುದಾರರು ಖಾತೆ ಬದಲಾವಣೆ ಮಾಡಿಸಿ ಪಹಣಿಯಲ್ಲಿ ಹೆಸರು ಬದಲಾಯಿಸಿಕೊಳ್ಳಬೇಕು. ಇಲ್ಲವಾದಲ್ಲಿ ರಾಜ್ಯ ಹಾಗೂ ಕೇಂದ್ರ ಸರಕಾರಗಳಿಂದ ದೊರಕುವ ಅನೇಕ ಯೋಜನೆಗಳ ಫಲ, ಸಬ್ಸಿಡಿ ದೊರಕುವುದಿಲ್ಲ. ಎಲ್ಲಾ ಗ್ರಾಮ ಲೆಕ್ಕಾಧಿಕಾರಿಗಳು, ಆಡಳಿತಾಧಿಕಾರಿಗಳು, ನಿಮ್ಮ ಮನೆಗಳಹತ್ತಿರ ಬಂದು ಮಾಹಿತಿ ಪಡೆದುಕೊಳ್ಳುತ್ತಾರೆ. ಅವರಿಗೆ ಸರಿಯಾದ ಮಾಹಿತಿ ನೀಡಿ ಖಾತೆ ಪಹಣಿ ಬದಲಾಯಿಸಿ ಕೊಳ್ಳಿ. ಈಗ ಮರಣ ಪ್ರಮಾಣ ಪತ್ರ ಇಲ್ಲದಿದ್ದರೂ ಖಾತೆ ಬದಲಾಯಿಸಿಕೊಳ್ಳಲು ಸರಳೀಕರಿಸಲಾಗಿದೆ ಎಂದರು.

ಬೆಳಿಗ್ಗೆ 11 ಗಂಟೆಗೆ ತಾಲೂಕಿನ ಬಿಳಿಗೆರೆ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ನಡೆದ ಜನ ಸಂಪರ್ಕ ಸಭೆಯಲ್ಲಿ ಒಟ್ಟು 101ಅರ್ಜಿಗಳು ಸಾರ್ವಜನಿಕರಿಂದ ಸ್ವೀಕೃತವಾದವು. ಅದರಲ್ಲಿ ಕಂದಾಯ ಇಲಾಖೆಗೆ 36 ಅರ್ಜಿಗಳು ಸ್ವೀಕೃತವಾಗಿವೆ. ತಾಲೂಕು ಪಂಚಾಯಿತಿಗೆ 27, ಅರ್ಜಿಗಳು ಸ್ವೀಕೃತವಾಗಿವೆ. ರಾಷ್ಟ್ರೀಯ ಹೆದ್ದಾರಿ 18, ಸರ್ವೆ ಇಲಾಖೆ 5, ಆರೋಗ್ಯ 4, ಕೃಷಿ 3, ಅರಣ್ಯ ಮತ್ತು ಶಿಕ್ಷಣ ಇಲಾಖೆ ತಲಾ 2 ಅರ್ಜಿಗಳು ಸ್ವೀಕೃತವಾದವು. ಸಂಜೆ 4 ಗಂಟೆಗೆ ನಗರದ ತಾಲೂಕು ಕಚೇರಿಯಲ್ಲಿ ನಡೆದ ಎರಡನೇ ಜನ ಸಂಪರ್ಕ ಸಭೆಯಲ್ಲಿ 134 ಅರ್ಜಿಗಳು ಸ್ವೀಕೃತವಾಗಿದ್ದು ತಾಲೂಕಿನ ಎರಡೂ ಸ್ಥಳಗಳ ಜನ ಸಂಪರ್ಕ ಸಭೆಗಳಿಂದ ಒಟ್ಟು . 234 ಅರ್ಜಿಗಳು ಸಾರ್ವಜನಿರಿಂದ ಸ್ವೀಕೃತವಾಗಿವೆ.ಸಭೆಯಲ್ಲಿ ಉಪವಿಭಾಗಾಧಿಕಾರಿ ಸಪ್ತಶ್ರೀ, ತಹಸೀಲ್ದಾರ್ ಮೋಹನ್ ಕುಮಾರ್.ಜಿ.ವಿ., ಪೌರಯುಕ್ತ,ವಿಶ್ವೇಶ್ವರ ಬರಗಡೆ, ತಾಲೂಕು ಪಂಚಾಯಿತಿ. ಕಾರ್ಯ ನಿರ್ವಾಹಣಾಧಿಕಾರಿ. ಸುದರ್ಶನ್. ಹಾಗೂ ಎಲ್ಲ ಇಲಾಖೆಗಳು ಅಧಿಕಾರಿಗಳು ಹಾಜರಿದ್ದರು."

## ದಾವಣಗೆರೆ ಕಾಂಗ್ರೆಸ್ ಬಂಡಾಯ:

### ಸಿಎಂ ಸಿದ್ದರಾಮಯ್ಯ ಭೇಟಿಯಾದ ಸಾದಿಕ್



ಬೆಂಗಳೂರು: ದಾವಣಗೆರೆ ದಕ್ಷಿಣ ವಿಧಾನಸಭಾ ಕ್ಷೇತ್ರದ ಉಪ ಚುನಾವಣೆಯಲ್ಲಿ ಕಾಂಗ್ರೆಸ್ ಬಂಡಾಯಕ್ಕೆ ಬಿಗ್ ಟ್ವಿಸ್ಟ್ ಸಿಕ್ಕಿದ್ದು, ನಾಮಪತ್ರ ಹಿಂಪಡೆಯದೇ ಕಣದಲ್ಲಿ ಉಳಿದಿದ್ದ ಬಂಡಾಯ ಅಭ್ಯರ್ಥಿ ಸಾದಿಕ್ ಪೈಲ್ವಾನ್ ಅವರು ಶುಕ್ರವಾರ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿದ್ದಾರೆ.

ಕಾಂಗ್ರೆಸ್ ಶಾಸಕರಾದ ರಿಜ್ವಾನ್ ಅರ್ಷದ್ ಹಾಗೂ ಸಲೀಂ ಅಹ್ಮದ್ ಖಾನ್ ಅವರು ಇಂದು ಸಾದಿಕ್ ಪೈಲ್ವಾನ್ ಅವರನ್ನು ಮುಖ್ಯಮಂತ್ರಿಗಳ ಅಧಿಕೃತ ನಿವಾಸ ಕಾವೇರಿಗೆ ಕರೆದುಕೊಂಡು ಬಂದಿದ್ದರು.

ಸಿಎಂ ಸಿದ್ದರಾಮಯ್ಯ ಅವರು ಸಾದಿಕ್ ಪೈಲ್ವಾನ್ ಅವರ ಮನವೊಲಿಸುವಲ್ಲಿ ಯಶಸ್ವಿಯಾಗಿದ್ದು, ಕಾಂಗ್ರೆಸ್ ಅಭ್ಯರ್ಥಿಯ ಪರವಾಗಿ ಪ್ರಚಾರ ಮಾಡಲು ಒಪ್ಪಿಕೊಂಡಿದ್ದಾರೆ ಎಂಬ ಮಾಹಿತಿ ಲಭ್ಯವಾಗಿದೆ.

ಎಸ್‌ಎಸ್ ಮಲ್ಲಿಕಾರ್ಜುನ ಪುತ್ರ ಸಮರ್ಥ್ ಗೆ ಟಿಕೆಟ್ ನೀಡಿದ್ದಕ್ಕಾಗಿ ಬಂಡಾಯ ಅಭ್ಯರ್ಥಿಯಾಗಿ ಕಣಕ್ಕಿಳಿದಿರುವ ಸಾದಿಕ್ ಪೈಲ್ವಾನ್ ಅವರು ಸಿಎಂ ಸಿದ್ದರಾಮಯ್ಯ ಮಾತಿಗೆ ಸಮ್ಮತಿ ಸೂಚಿಸಿದ್ದು, ಪಕ್ಷದ ಅಭ್ಯರ್ಥಿ ಪರವಾಗಿ ಕೆಲಸ ಮಾಡುವುದಾಗಿ ಹೇಳಿದ್ದಾರೆ.

ಟಿಕೆಟ್ ನಿರಾಕರಿಸಿದ್ದಕ್ಕೆ ಆಕ್ರೋಶಗೊಂಡು ನಾಮಪತ್ರ ಸಲ್ಲಿಸಿದ್ದೆ, ನಿಮ್ಮ ಜೊತೆಗಿನ ಮಾತುಕತೆ ಸಮಾಧಾನ ತಂದಿದೆ. ಈಗಿನಿಂದಲೇ ಪಕ್ಷದ ಅಭ್ಯರ್ಥಿ ಪರವಾಗಿ ಕೆಲಸ ಮಾಡುತ್ತೇನೆ. ನಮ್ಮ ಕ್ಷೇತ್ರದಲ್ಲಿ ಬಿಜೆಪಿ ಗೆಲ್ಲಬಾರದು, ನಾವೆಲ್ಲರೂ ಒಗ್ಗಟ್ಟಿನಿಂದ ಕೆಲಸ ಮಾಡುತ್ತೇವೆಂದು ಸಾದಿಕ್ ಅವರು ಸಿಎಂಗೆ ಭರವಸೆ ನೀಡಿದ್ದಾರೆ ಎಂಬ ಮಾಹಿತಿ ಇದೆ.

ಸಿಎಂ ಭೇಟಿ ಬಳಿಕೆ ಡಿಸಿಎಂ ಡಿ.ಕೆ ಶಿವಕುಮಾರ್ ಭೇಟಿಗೆ ಸಾದಿಕ್ ಪೈಲ್ವಾನ್ ತೆರಳಿದ್ದಾರೆ. ಈ ಮೂಲಕ ದಾವಣಗೆರೆ ದಕ್ಷಿಣದಲ್ಲಿ ಕಾಂಗ್ರೆಸ್ ಬಂಡಾಯ ಶಮನವಾದಂತಾಗಿದೆ.

## ಕಚೇರಿಯಲ್ಲಿ ಭ್ರಷ್ಟಾಚಾರದ ಬಣ್ಣ ಬಯಲು

### ಲೋಕಾಯುಕ್ತ ಪೊಲೀಸರು ರೆಡ್ ಹ್ಯಾಂಡ್ ಸಿಕ್ಕಿದ ಆರೋಗ್ಯಾಧಿಕಾರಿ




ತುಮಕೂರು, : ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿಗಳ ಕಚೇರಿಯಲ್ಲಿ ಭ್ರಷ್ಟಾಚಾರದ ಬಣ್ಣ ಬಯಲಾಗಿದೆ. ಆರೋಗ್ಯ ಜಾಗೃತಿ ಕಾರ್ಯಕ್ರಮದ ಬಿಲ್ ಪಾವತಿಸಲು ಎನ್ ಜಿಒ ಅಧ್ಯಕ್ಷರಿಂದ ಲಂಚ ಸ್ವೀಕರಿಸುತ್ತಿದ್ದ ಲೆಕ್ಕಪತ್ರ ವ್ಯವಸ್ಥಾಪಕ ಅರವಿಂದ್ ಅವರನ್ನು ಲೋಕಾಯುಕ್ತ ಪೊಲೀಸರು ರೆಡ್ ಹ್ಯಾಂಡ್ ಆಗಿ ಹಿಡಿದಿದ್ದಾರೆ.

2025–26ರ ರಾಷ್ಟ್ರೀಯ ಆರೋಗ್ಯ ಅಭಿಯಾನದ ಅಡಿ ಜಿಲ್ಲೆಯ 10 ತಾಲೂಕುಗಳ ಜಾತ್ರೆ ಮತ್ತು ಸಂತೆಗಳಲ್ಲಿ ಆರೋಗ್ಯ ಜಾಗೃತಿ ವಸ್ತು ಪ್ರದರ್ಶನ ಏರ್ಪಡಿಸಲಾಗಿತ್ತು. ಜಿಲ್ಲೆಯ ಹತ್ತು ತಾಲ್ಲೂಕುಗಳಲ್ಲಿ ಜಾತ್ರೆ, ಸಂತೆಗಳಲ್ಲಿ ಆರೋಗ್ಯ ಕುರಿತ ವಸ್ತು ಪ್ರದರ್ಶನ ಮಾಡಲಾಗಿತ್ತು. ಈ ಕಾರ್ಯಕ್ರಮ ನಡೆಸಿದ್ದ ಎನ್‌ಜಿಒಗೆ ಬರಬೇಕಿದ್ದ 1.98 ಲಕ್ಷ ರೂ. ಬಿಲ್ ಪಾವತಿಸಲು ಅರವಿಂದ್ ಲಂಚಕ್ಕೆ ಬೇಡಿಕೆ ಇಟ್ಟಿದ್ದರು. ಬಿಲ್ ಬಿಡುಗಡೆ ಮಾಡಲು ಅರವಿಂದ್ 12 ಸಾವಿರ ರೂ. ಲಂಚ ಕೇಳಿದ್ದರು. ಎನ್ ಜಿಒ ಅಧ್ಯಕ್ಷ ರಾಜಶೇಖರ್ ಅವರು ಲಂಚ ನೀಡಲು ನಿರಾಕರಿಸಿ ಲೋಕಾಯುಕ್ತಕ್ಕೆ ದೂರು ನೀಡಿದ್ದರು. ದೂರಿನ ಹಿನ್ನೆಲೆಯಲ್ಲಿ ಕಾರ್ಯಾಚರಣೆ ನಡೆಸಿದ ಲೋಕಾಯುಕ್ತ ಪೊಲೀಸರು, ಇಂದು ಸಂಜೆ 4:10ಕ್ಕೆ ಕಚೇರಿ ಕಾಂಪೌಂಡ್ ಒಳಗೆ ರಾಜಶೇಖರ್ ಅವರಿಂದ 12 ಸಾವಿರ ರೂ. ಲಂಚ ಸ್ವೀಕರಿಸುತ್ತಿದ್ದ ಅರವಿಂದ್ ಅವರನ್ನು ವಶಕ್ಕೆ ಪಡೆದಿದ್ದಾರೆ.

## ಶ್ರೀರಾಮ ಮಂದಿರದಲ್ಲಿ ರಾಮನವಮಿ ಆಚರಣೆ 8 ದಿನಗಳ ರಾಮೋತ್ಸವ:

ತುಮಕೂರು: ನಗರದ ಕೆ.ಆರ್. ಬಡಾವಣೆಯ ಶ್ರೀರಾಮ ಸೇವಾ ಸಮಿತಿಯಿಂದ ಶ್ರೀರಾಮ ನವಮಿ ಅಂಗವಾಗಿ 59ನೇ ವರ್ಷದ ಶ್ರೀರಾಮೋತ್ಸವದಲ್ಲಿ 8 ದಿನಗಳ ವಿಶೇಷ ಪೂಜೆ ಹಾಗೂ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ.

ಶ್ರೀರಾಮನವಮಿ ಪ್ರಯುಕ್ತ ಶುಕ್ರವಾರ ಶ್ರೀರಾಮ ದೇವಾಲಯದಲ್ಲಿ ಶ್ರೀರಾಮ ಮೂರ್ತಿಗೆ ಅಭಿಷೇಕ, ವಿಶೇಷ ಅಲಂಕಾರ, ಪೂಜೆ ಏರ್ಪಡಿಸಲಾಗಿತ್ತು. ಮೊದಲ ದಿನದ ವಿಶೇಷ ಪೂಜೆಯನ್ನು ಉದ್ಯಮಿ ಡಿ.ಆರ್. ರಾಘವೇಂದ್ರ ಗುಪ್ತ ಕುಟುಂಬದವರು ಆಯೋಜಿಸಿದ್ದರು. ಅಪಾರ ಸಂಖ್ಯೆಯ ಭಕ್ತರು ಆಗಮಿಸಿ ಶ್ರೀರಾಮ ದೇವರ ದರ್ಶನ ಪಡೆದು ಪೂಜೆ ಸಲ್ಲಿಸಿದರು. ಭಕ್ತರಿಗೆ ಪ್ರಸಾದ, ಹೆಸರುಬೇಳೆ, ಪಾನಕ, ಮಜ್ಜಿಗೆ ವಿತರಣೆ ಮಾಡಲಾಯಿತು.

ಶ್ರೀರಾಮ ಸೇವಾ ಸಮಿತಿ ಅಧ್ಯಕ್ಷ ಜಿ.ವಿ. ಶ್ರೀನಿವಾಸ್, ಉಪಾಧ್ಯಕ್ಷರಾದ ಜಿ.ವಿ. ವಾಸುದೇವ್, ಜಗಜ್ಯೋತಿ ಸಿದ್ಧರಾಮಯ್ಯ, ಸುಭಾಷಿಣಿರವೀಶ್, ರೇಣುಕಾ, ಕಾರ್ಯದರ್ಶಿ





ಕೆ.ಜಿ. ಶ್ರೀಧರ್, ಸಹ ಕಾರ್ಯದರ್ಶಿ ಹೆಚ್. ಎಸ್. ಬಸವರಾಜು, ಖಜಾಂಚಿ ಪಿ.ಕೆ. ರಾಘವೇಂದ್ರ, ಮುಖಂಡರಾದ ಸಿಂಧೂರ್ ಶ್ರೀನಿವಾಸ್, ರಂಗಾನಾಯ್ಕ್ ಸೇರಿದಂತೆ ವಿವಿಧ ಗಣ್ಯರು ಶ್ರೀರಾಮನವಮಿ ಪೂಜಾ ಕಾರ್ಯಕ್ರಮದಲ್ಲಿ ಪಾಲ್ಗೊಂಡಿದ್ದರು.

ಶ್ರೀರಾಮೋತ್ಸವದ ಅಂಗವಾಗಿ ಏಪ್ರಿಲ್ 3ರವರೆಗೆ ಶ್ರೀರಾಮನಿಗೆ ಪ್ರತಿದಿನ ವಿಶೇಷ ಪೂಜೆ, ವಿವಿಧ ಅಲಂಕಾರ ಹಾಗೂ ರಾಮಮಂದಿರದ ಡಾ. ಜಯರಾಮರಾವ್ ವೇದಿಕೆಯಲ್ಲಿ ಸಂಜೆ 6.30ಕ್ಕೆ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ಆಯೋಜಿಸಲಾಗಿದೆ. 27ರಂದು ಎನ್.ಕೆ. ಮೋಹನ್‌ಕುಮಾರ್ ಮತ್ತು ವೃಂದದಿಂದ ಹರಿಕಥೆ, 28ರಂದು ಮೇಧಾ ವಿದ್ಯಾಭೂಷಣ್ ಮತ್ತು ವೃಂದದ ನಾದ ಸಂಕೀರ್ತನೆ, 29ರಂದು ಅಂಜಲಿ ಶ್ರೀರಾಮ್ ಅವರಿಂದ ದಾಸರ ಪದಗಳ ಗಾಯನ, 30ರಂದು ಮೈಸೂರು ರಾಮಚಂದ್ರ ಆಚಾರ್ ಅವರಿಂದ ಸಂಕೀರ್ತನೆ, 31ರಂದು ಮಾಲತಿ ರಾಘವೇಂದ್ರ ಮತ್ತು ದಿವ್ಯಾ ದಿವಾಕರ್ ಅವರಿಂದ ಶಾಸ್ತ್ರೀಯ ಸಂಗೀತ, ಏಪ್ರಿಲ್ 1ರಂದು ಬಸಂತ್ ಚಂದ್ರಶೇಖರ್ ಅವರ ಮೆಂಡೋಲಿನ್ ವಾದನ, 2ರಂದು ಸುಳಾದಿ ಹನುಮೇಶಾಚಾರ್ ಅವರಿಂದ ಶ್ರೀರಾಮ ಪಟ್ಟಾಭಿಷೇಕ ಪ್ರವಚನ, ಕೊನೆಯ ದಿನ ಏಪ್ರಿಲ್ 3ರಂದು ಸಂಜೆ 6 ಗಂಟೆಗೆ ಶಯನೋತ್ಸವ ಹಮ್ಮಿಕೊಳ್ಳಲಾಗಿದೆ.

## ಜನತೆ ನನ್ನ ಮೇಲೆ ವಿಶ್ವಾಸ ವಿಟ್ಟು 2028ಕ್ಕೆ ಶಾಸಕನಾಗಿ ಆಯ್ಕೆ ಮಾಡಿದರೆ,

### ಶಿರಾ ತಾಲೂಕನ್ನು ಮಾದರಿ ಕ್ಷೇತ್ರವನ್ನಾಗಿ ಮಾಡುವೆ, ಎಂ ಎಲ್ ಸಿ ಚಿದಾನಂದ ಗೌಡ

ಶಿರಾ : ಗ್ರಾಮೀಣ ಪ್ರದೇಶದ ಮಹಿಳೆಯರಲ್ಲಿ ನವ ಚೈತನ್ಯ ಮೂಡಿಸಿ, ನಮ್ಮ ನಾಡಿನ ಸಾಂಸ್ಕೃತಿಕ ಪರಂಪರೆಯ ಶ್ರೀಮಂತಿಕೆಯನ್ನು ಮತ್ತಷ್ಟು ಗಟ್ಟಿಗೊಳಿಸುವ ನಿಟ್ಟಿನಲ್ಲಿ ಈ ರಂಗೋಲಿ ಸ್ಪರ್ಧೆಗಳು ಪೂರಕ ವಾತಾವರಣ ಕಲ್ಪಿಸಲಿವೆ. ವಿಧಾನ ಪರಿಷತ್ ಸದಸ್ಯ ಸರ್ಕಾರಿ ಶಾಲೆಗಳ ಅಭಿವೃದ್ಧಿಗೆ ಹೆಚ್ಚು ಆದ್ಯತೆ ನೀಡಿದ್ದೇನೆ, 2028ರ ವಿಧಾನಸಭಾ ಚುನಾವಣೆಯಲ್ಲಿ ಶಿರಾ ಕ್ಷೇತ್ರದ ಜನತೆ ನನ್ನ ಮೇಲೆ ನಂಬಿಕೆ, ವಿಶ್ವಾಸವಿಟ್ಟು ಶಾಸಕನಾಗಿ ಆಯ್ಕೆ ಮಾಡಿದರೆ ಶಿರಾ ಕ್ಷೇತ್ರವನ್ನು ಅಭಿವೃದ್ಧಿಪಡಿಸಿ ರಾಜ್ಯದಲ್ಲಿಯೇ ಮಾದರಿ ಕ್ಷೇತ್ರ ಮಾಡುವ ಸಂಕಲ್ಪ ಮಾಡಿದ್ದೇನೆ ಎಂದು ವಿಧಾನ ಪರಿಷತ್ ಸದಸ್ಯ ಚಿದಾನಂದ ಎಂ ಗೌಡ ಹೇಳಿದರು.

ಶಿರಾ ತಾಲೂಕಿನ ಪಟ್ಟನಾಯಕನಹಳ್ಳಿ ಗ್ರಾಮದ ಶ್ರೀ ಗುರು ಗುಂಡ ಬ್ರಹ್ಮೇಶ್ವರ ಸ್ವಾಮಿ ಮಠದ ಆವರಣದಲ್ಲಿ ಶ್ರೀ ರಾಮನವಮಿಯ ಸಂಭ್ರಮ ತರಲು ಎಂಎಲ್ಸಿ ಚಿದಾನಂದ್ ಎಂ. ಗೌಡ ಅಭಿಮಾನಿ ಬಳಗದಿಂದ ಶುಕ್ರವಾರ ಆಯೋಜಿಸಲಾಗಿದ್ದ ರಂಗೋಲಿ



ಸ್ಪರ್ಧೆಯಲ್ಲಿ ವಿಜೇತರಿಗೆ ಬಹುಮಾನ ವಿತರಿಸಿ ಮಾತನಾಡಿದರು.

ಶಿರಾ ತಾಲೂಕಿನ ಪ್ರತಿಯೊಂದು ಗ್ರಾಮದ ದೇವಸ್ಥಾನ, ಸಾರ್ವಜನಿಕ ಸ್ಥಳಗಳಲ್ಲಿ ಸೂರ್ಯಬಿಂಬ ಹೈ ಮಾಸ್ಕ್ ದೀಪ ಅಳವಡಿಸಿ ಬೆಳಕು ನೀಡುತ್ತಿರುವ ಸೇವೆ ಹೆಚ್ಚು ತೃಪ್ತಿ ನೀಡುತ್ತದೆ. ಅದೇ ರೀತಿ ತಾಲೂಕಿನ 250 ಗ್ರಾಮಗಳಲ್ಲಿಯೂ ಕೂಡ ರಂಗೋಲಿ ಸ್ಪರ್ಧೆ ಏರ್ಪಡಿಸಿ ಮಹಿಳೆಯರಲ್ಲಿ ಹೊಸ ಉತ್ಸಾಹದ ಜೊತೆಗೆ ಮಹಿಳೆಯರಲ್ಲಿ ಸ್ನೇಹಮಯ ವಾತಾವರಣ ಮೂಡಿಸಿ ಸಮಾಜದ ಮುಖ್ಯ ವಾಹಿನಿಗೆ ತರುವುದೇ ನಮ್ಮ ಗುರಿ. ಸುಸಂಸ್ಕೃತ ಸಮಾಜ ನಿರ್ಮಾಣ ಮಾಡಲು ಮಹಿಳೆಯರ ಪ್ರಾಮಾಣಿಕತೆಯೇ ದೊಡ್ಡ ಶಕ್ತಿ ಎಂದರು.

ಬಿಜೆಪಿ ಜಿಲ್ಲಾ ಉಪಾಧ್ಯಕ್ಷ ಚಿಕ್ಕಣ್ಣ, ಗ್ರಾಮಾಂತರ ಮಂಡಲ ಅಧ್ಯಕ್ಷ ಈರಣ್ಣ ಪಟೇಲ್, ಕಾರ್ಯದರ್ಶಿ ಕುಮಾರ್ ಮಾಸ್ಟರ್, ಮಹಾ ಶಕ್ತಿ ಕೇಂದ್ರ ಅಧ್ಯಕ್ಷ ಕೆ.ಎಸ್.ನಾಗರಾಜ, ಮುಖಂಡ ನಾಗೇಶ್, ಬಿಜೆಪಿ ತಾಲೂಕು ಉಪಾಧ್ಯಕ್ಷ ನಾಗರಾಜ್ ಗೌಡ, ನಾದೂರು ಕುಮಾರ್, ಪ್ರೇಮ ಹೆಗ್ಗಡೆ, ತಿಮ್ಮರಾಜಮ್ಮ, ಗ್ರಾಮ ಪಂಚಾಯತಿ ಮಾಜಿ ಸದಸ್ಯೆ ತುಳಸಿ, ಮೇಘಶ್ರೀ, ಪ್ರಧಾನ ಕಾರ್ಯದರ್ಶಿ ಭಾಸ್ಕರ್, ಹಿರಿಯ ಬಿಜೆಪಿ ಮುಖಂಡ ಬರಗೂರು ಶಿವಕುಮಾರ್, ಎಂ. ಶಿವಲಿಂಗಯ್ಯ, ಯುವ ಮೋರ್ಚಾ ಅಧ್ಯಕ್ಷ ಸ್ನೇಹಪ್ರಿಯ ಶಿವು, ಶಶಿ ಕುಮಾರ್, ಒಬಿಸಿ ಮೋರ್ಚಾ ಅಧ್ಯಕ್ಷ ಗೌಡಪ್ಪ, ಯುವ ಮುಖಂಡ ರಂಗನಾಥ್ ಸೇರಿದಂತೆ ನೂರಾರು ಮಹಿಳೆಯರು ಉಪಸ್ಥಿತರಿದ್ದರು

# ಬೆಂಗಳೂರು ನನಗೆ ಎಲ್ಲವನ್ನು ಕೊಟ್ಟಿದೆ: ತೀರ್ಮಾನ ಟೀಕಿಸುತ್ತಿರುವವರು ಮುಂದೆ ಸ್ಮರಿಸುತ್ತಾರೆ; ಡಿ.ಕೆ. ಶಿವಕುಮಾರ್



ಬೆಂಗಳೂರು: ನಗರದ ಹಿತಕ್ಕೆ ನಾವು ಕೈಗೊಂಡಿರುವ ಅನೇಕ ತೀರ್ಮಾನಗಳ ಬಗ್ಗೆ ವಿರೋಧ ಪಕ್ಷದವರು ಟೀಕೆ ಮಾಡಬಹುದು, ಮಾಡಲಿ. ಆದರೆ ಮುಂದಿನ ಐದು ವರ್ಷಗಳ ನಂತರ ಡಿ.ಕೆ. ಶಿವಕುಮಾರ್ ಉತ್ತಮ ನಿರ್ಧಾರ ಕೈಗೊಂಡರು ಎಂದು ಹೇಳುತ್ತಾರೆ. ನನಗೆ ಅಷ್ಟೇ ಸಾಕು ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಗುರುವಾರ ಉತ್ತರಿಸಿದರು.

ವಿಧಾನಸಭೆಯಲ್ಲಿ ಗ್ರೇಟರ್ ಬೆಂಗಳೂರು ವಿಚಾರವಾಗಿ ನಡೆದ ಚರ್ಚೆಯ ವೇಳೆ ಮಾತನಾಡಿದ ಅವರು ಈಗ ನಾನು ಬೇರೆಯವರಿಗೆ ಒಪ್ಪಿಸಲು ಆಗದೇ ಇರಬಹುದು. ಆದರೆ ಸಮಯ ಬಂದಾಗ ಅವರು ಒಪ್ಪುತ್ತಾರೆ. ಜಿಬಿಎ ಸಂಬಂಧಿಸಿದಂತೆ ವಿರೋಧ ಪಕ್ಷದ ನಾಯಕರು ಅನೇಕ ಚರ್ಚೆ ನಡೆಸಿದ್ದಾರೆ. ಅರ್. ಅಶೋಕ್, ಅಶ್ವಥ್ ನಾರಾಯಣ್ ಅನೇಕ ಸಲಹೆ ನೀಡಿದ್ದಾರೆ. ಇವರ ಸಲಹೆಗಳನ್ನು ನಾನು ಒಪ್ಪುತ್ತೇನೆ. ಜತೆಗೆ ಟೀಕೆಯನ್ನೂ ಸಹ ಮಾಡಿದ್ದಾರೆ. ನಾನು ಟೀಕೆಯನ್ನು ಯಾವಾಗಲೂ ಸ್ವೀಕಾರ ಮಾಡುವವನು.

ಟೀಕೆ ಇಲ್ಲದೇ ಹೋದರೆ ಯಾವುದೇ ಮನುಷ್ಯನನ್ನು ಬದಲಾವಣೆ ಮಾಡಲು ಸಾಧ್ಯವಿಲ್ಲ. ಚಿನ್ನ ಪರೀಕ್ಷೆ ಮಾಡುವಾಗ ಬೆಂಕಿಗೆ ಹಾಕುತ್ತಾರೆ. ಮನುಷ್ಯನನ್ನು ಪರೀಕ್ಷೆ ಮಾಡುವಾಗ ಟೀಕೆಗಳು, ಆಪಾದನೆ ಮಾಡುತ್ತಾರೆ. ಇದನ್ನು ನಾವು ಯಾವ ರೀತಿ ತಿದ್ದಿಕೊಳ್ಳಬೇಕು ಎಂಬುದು ಇಲ್ಲಿ ಮುಖ್ಯವಾದುದು. ಟೀಕೆ ಮಾಡಿದರು ಎಂದ ತಕ್ಷಣ ನಾನು ಸಿಟ್ಟು ಮಾಡಿಕೊಳ್ಳುವುದು ಮಾಡುವುದಿಲ್ಲ ಎಂದರು.

ಆಸಕ್ತಿ ಪಟ್ಟು ಬೆಂಗಳೂರು ಅಭಿವೃದ್ಧಿ ಖಾತೆಯನ್ನು ವಹಿಸಿಕೊಂಡಿದ್ದೇನೆ. ನಾನು ಈ ಹಿಂದೆ ನಗರಾಭಿವೃದ್ಧಿ ಸಚಿವನಾಗಿದ್ದೆ, ಇಂಧನ ಸಚಿವನಾಗಿದ್ದೆ, ನನಗೆ ಈಗ ಸಾಕಷ್ಟು ಅನುಭವ ಹೊಂದಿದ್ದು ಬೆಂಗಳೂರಿನಲ್ಲೂ ಬದಲಾವಣೆ ಮಾಡಬೇಕು ಎಂದು ಹೊರಟಿದ್ದೇನೆ. ಆದರೂ ಒಂದಷ್ಟು ಜನ ತಪ್ಪು ಕಂಡುಹಿಡಿದರು. ಇದು ವಿರೋಧ ಪಕ್ಷದ ಕರ್ತವ್ಯವೂ ಹೌದು ಎಂದರು.

ನಾನು ಬೆಂಗಳೂರು ಅಭಿವೃದ್ಧಿ ಇಲಾಖೆ ಜವಾಬ್ದಾರಿ ಹೊತ್ತುಕೊಂಡ ಮೇಲೆ ಸಾಕಷ್ಟು ಅಧ್ಯಯನ ನಡೆಸಿದ್ದೇನೆ. ಬೆಂಗಳೂರಿನ ಸಮಸ್ಯೆಗಳಿಗೆ ಪರಿಹಾರ ಹುಡುಕುತ್ತಿದ್ದೇನೆ. ಆಗ 70 ಲಕ್ಷ ಇದ್ದ ಜನಸಂಖ್ಯೆ ಈಗ 1.40 ಕೋಟಿ ಆಗಿದೆ. 1.30 ಲಕ್ಷ ವಾಹನಗಳಿವೆ. ಬೇರೆ ನಗರಗಳಲ್ಲಿ ದೊಡ್ಡ ರಸ್ತೆಗಳು ಶೇ. 16ರಷ್ಟಿವೆ. ನಮ್ಮಲ್ಲಿ ಶೇ. 8ರಷ್ಟು ಮಾತ್ರ ಇದೆ. ಈ ಹಿಂದೆ ನೈಸ್ ರಸ್ತೆ ಮಾಡಿದರೂ ಪೂರ್ಣಗೊಳಿಸಲಿಲ್ಲ. ಫೆರಿಫೆರಲ್ ರಿಂಗ್ ರಸ್ತೆ ಅಂದು ಮಾಡಿದ್ದರೆ 3 ಸಾವಿರ ಕೋಟಿ ರುಪಾಯಿಗೆ ಮುಗಿದು ಹೋಗುತ್ತಾ ಇತ್ತು. ಈ ಎಲ್ಲ ಕಾರಣಗಳಿಂದ ಸಂಚಾರ ದಟ್ಟಣೆ ಉಂಟಾಗಿದೆ ಎಂದರು.

ಬೆಂಗಳೂರು ನಗರದ ಆಡಳಿತ ಸುಧಾರಣೆಗಾಗಿ 2025 ಮೇ 15ರಂದು ಹೊಸ ನೋಟಿಫಿಕೇಶನ್ ಮಾಡಿ ಪ್ರಸ್ತುತ ಇರುವ ಪ್ರದೇಶಗಳನ್ನು ಸೇರಿ ಐದು ಪಾಲಿಕೆಗಳನ್ನು ಮಾಡಲಾಯಿತು. ಸೆಪ್ಟೆಂಬರ್ 2ರಂದು 74ನೇ ತಿದ್ದುಪಡಿ ತರಬೇಕು ಎಂದು ಹೊರಡಲಾಯಿತು. ಏಕಾಏಕಿ ತೀರ್ಮಾನ ಮಾಡಲಿಲ್ಲ. ವಿರೋಧ ಪಕ್ಷದ ನಾಯಕರ ಮಾತಿನಂತೆ ಸದನ ಸಮಿತಿ ರಚನೆ ಮಾಡಿ ಅವರು ನೀಡಿದ ಸಲಹೆಗಳನ್ನು ತೆಗೆದುಕೊಳ್ಳಲಾಯಿತು. ಇದರಲ್ಲಿ ತಪ್ಪುಗಳಿದ್ದರೆ ಅದನ್ನೂ ಸಹ ತಿದ್ದುಪಡಿ ಮಾಡಲಾಗುವುದು. ಈಗ 369 ವಾರ್ಡ್‌ಗಳನ್ನು ಮಾಡಲಾಗಿದೆ. ಬೆಂಗಳೂರನ್ನು ಯಾವುದೇ ಕಾರಣಕ್ಕೂ ಒಡೆಯುತ್ತಿಲ್ಲ. ಇದು ಆಡಳಿತದ ವಿಕೇಂದ್ರಿಕರಣ. ಬೆಂಗಳೂರಿನಲ್ಲಿ ದೊಡ್ಡ ಯೋಜನೆಗಳನ್ನು ಕೈಗೆತ್ತಿಕೊಳ್ಳಬೇಕಾಗುತ್ತದೆ ಅದಕ್ಕೆ ಸರ್ಕಾರ ಸಹಾಯ ಬೇಕಾಗುತ್ತದೆ ಅದಕ್ಕೆ ಜಿಬಿಎಗೆ ಮುಖ್ಯಮಂತ್ರಿಯವರನ್ನು ಮುಖ್ಯಸ್ಥರನ್ನಾಗಿ ಮಾಡಲಾಗಿದೆ. ಬೆಂಗಳೂರಿಗೆ ಪ್ಲಾನಿಂಗ್ ಅಥಾರಿಟಿ ಇರಲಿಲ್ಲ ಅದನ್ನು ಸಹ ಬಗೆಹರಿಸಲಾಗಿದೆ. ಜಿಬಿಎ ಇದರ ಬಗ್ಗೆ ತೀರ್ಮಾನ ಮಾಡುತ್ತದೆ ಎಂದು ತಿಳಿಸಿದರು.

ಮೋದಿಯವರು ಏಕೆ ಬೆಂಗಳೂರನ್ನು ಗ್ಲೋಬಲ್ ಸಿಟಿ ಎಂದು ಕರೆದರು. ಭವಿಷ್ಯದ ಎಲ್ಲಾ ಸವಾಲುಗಳಿಗೆ ಬೆಂಗಳೂರನ್ನು ಸಿದ್ದತೆ ಮಾಡಿಕೊಳ್ಳಬೇಕು ಎಂದು ಅವರು ಹೇಳಿದರು. ಅಟಲ್ ಬಿಹಾರಿ ವಾಜಪೇಯಿ ಅವರು ಬೆಂಗಳೂರು ಮೂಲಕ ಭಾರತವನ್ನು ನೋಡಲಾಗುತ್ತದೆ ಎಂದು ಹೇಳಿದ್ದರು. ಜಾಗತಿಕ ನಾಯಕರು ಮೊದಲು ದೆಹಲಿಗೆ ಬರುತ್ತಿದ್ದರು ಈಗ ಸಮಯ ಬದಲಾಗಿದೆ ಮೊದಲು ಬೆಂಗಳೂರಿಗೆ ಬರುತ್ತಾರೆ ಎಂದಿದ್ದರು. ಇದು ಕೇವಲ ನಮ್ಮಿಂದ ಮಾತ್ರವಲ್ಲ, ಪ್ರತಿಭಾವಂತ ಯುವಕರು, ನಾಗರೀಕರು ಎಲ್ಲಾ ಸರ್ಕಾರಗಳಿಂದ ಸಾಧ್ಯವಾಗಿದೆ ಎಂದು ತಿಳಿಸಿದರು.

## ಬೇಸಿಗೆ ಕವಿತೆ

1. ಆಗೊಂದು ಈಗೊಂದು ಕಿತ
ಸೂರ್ಯದೇವರ ಮೊಕ್ತ ಪಾಳೆಗಾರಿಕೆ
ಅವರು ನಮ್ಮೂರ ಖಾಸಾ ಅಳಿಯ
ಏಸು ಚೀಲ ತಂದೀರಿ ನೀವು, ತನ್ನಿ
ಒಸೂ ತುಂಬಿ ಒತ್ತೊತ್ತಿ ಕೂರಿದರೂ
ಮಿಕ್ಕು ಇಟ್ಟಾಡುತ್ತದೆ ಕೇರಿಮುಖಗಳ
ಸೀಯ್ವ ರಾಕ್ಷಸ ಬಿಸಿಲು !
ಕವನ ಕಥೆ ವಗೈರೆ
ಹಳಸಿದ್ದೆ ಇಲ್ಲ ನಮ್ಮೂರಲ್ಲಿ
ಅಳಿಯ ದೇವರ ಕೃಪೆ
ಅವು ಸದಾ ಆಗಿಳಿಸಿದಂತೆ
ಗರಾಂಗರಂ
–2–
ಗಂಗಳದ ಮೂಲೆಗೆ ತೆಳ್ಳನ್ನೆ ಮುದ್ದೆ
ಸೊಪ್ಪಿನೆಸರು, ಎಳ್ಳಿಕಾಯಿ ಉಪ್ಪಿನಕಾಯಿ
ದೊಡ್ಡ ಮಿಳ್ಳೆಯೊಳಗೆ ತಣ್ಣನ್ನೆ ಶಿವದಾನ
ನಡುಮದ್ದೆನ ನಿಸೂರಾಗಿ ಒಳಗಿಳಿಸಿ
ಹೊಂಗೆ ನೆರಳಿಗೆ ಸರಿದು ಬಿಟ್ಟರೆ
ಮುಂಗಣ್ಣು ಮಣ ಬೆಲ್ಲ ತೂಗಿ
ಬೇಸಿಗೆಯೆಂಬುದೂ
ಆಹಾ ! ತಿಂಗಳ ಬೆಳಕು

# ಹೀಟ್ ವೇವ್ ಸ್ಟ್ರೋಕ್‌ನಿಂದಾಗಿ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆ ಮುನ್ನೆಚ್ಚರಿಕೆ ವಹಿಸಲು ಸಲಹೆ

ಬೇಸಿಗೆಯಲ್ಲಿ ಅಧಿಕ ಉಷ್ಣಾಂಶ ದಾಖಲಾಗುತ್ತಿದ್ದು, ಹೀಟ್ ವೇವ್ ಸ್ಟ್ರೋಕ್‌ನಿಂದಾಗಿ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಾಧ್ಯತೆ ಇದೆ. ಹಾಗಾಗಿ ಸಾರ್ವಜನಿಕರು ಅಗತ್ಯ ಮುಂಜಾಗ್ರತೆ ವಹಿಸಬೇಕು. ಸಾರ್ವಜನಿಕರು ರೇಡಿಯೋ, ಟಿವಿ, ದಿನಪತ್ರಿಕೆಗಳಲ್ಲಿ ಬರುವ ಅತಿಯಾದ ಬಿಸಿಲಿನ ಕುರಿತು ಮುನ್ಸೂಚನೆಗಳನ್ನು ಗಮನಿಸಬೇಕು, ಬಾಯಾರಿಕೆಯಿಲ್ಲದಿದ್ದರೂ ಸಾಕಷ್ಟು ಮತ್ತು ಸಾಧ್ಯವಾದಷ್ಟು ಹೆಚ್ಚಾಗಿ ನೀರನ್ನು ಕುಡಿಯಬೇಕು, ಹಗುರವಾದ, ತಿಳಿ ಬಣ್ಣದ ಸಡಿಲ ಮತ್ತು ರಂಧ್ರವುಳ್ಳ ಹತ್ತಿ ಬಟ್ಟೆಗಳನ್ನು ಧರಿಸಬೇಕು. ಬಿಸಿಲಿನಲ್ಲಿ ಹೋಗುವಾಗ ರಕ್ಷಣಾತ್ಮಕ ಕನ್ನಡಕಗಳು, ಛತ್ರಿ/ಟೋಪಿ, ಬೂಟುಗಳು ಅಥವಾ ಚಪ್ಪಲಿ ಬಳಸಬೇಕು.

ತುಮಕೂರು : ಜಿಲ್ಲೆಯಲ್ಲಿ ಹೀಟ್ ವೇವ್ ಆತಂಕ ಶುರುವಾಗಿದೆ. ಬಿಸಿಲು, ಬಿಸಿಗಾಳಿಯಿಂದ ಜನ ತತ್ತರಿಸುತ್ತಿದ್ದಾರೆ. ಈ ಹಿನ್ನೆಲೆಯಲ್ಲಿ ವಿಪತ್ತು ನಿರ್ವಹಣಾ ಪ್ರಾಧಿಕಾರ 'ಮುನ್ನೆಚ್ಚರಿಕೆಯ ಮಾರ್ಗಸೂಚಿ' ನೀಡಿದೆ.

ತುಮಕೂರಲ್ಲಿ ಈಗಲೇ 30–35 ಡಿಗ್ರಿ ಸೆಲ್ಸಿಯಸ್‌ವರೆಗೂ ತಾಪಮಾನ ದಾಖಲಾಗುತ್ತಿದೆ. ಈ ಬಾರಿ ಬೇಸಿಗೆ ಅವಧಿಯಲ್ಲಿ ಸಾಮಾನ್ಯಕ್ಕಿಂತ ಹೆಚ್ಚಿನ ತಾಪಮಾನ ದಾಖಲಾಗುವ ಸಾಧ್ಯತೆ ಹೆಚ್ಚಿದೆ. ಇದರಿಂದ ಹೀಟ್ ವೇವ್ (ಶಾಖದ ಅಲೆ) ಉಂಟಾಗಿ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಎದುರಾಗುವ ಸ್ಥಿತಿಯ ಸೂಚನೆಯನ್ನು 'ಬಿಸಿಲು' ನೀಡಿದೆ. ಈ ಹಿನ್ನೆಲೆಯಲ್ಲಿ ಸಾರ್ವಜನಿಕರು ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕಿದೆ.

ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷೆ, ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ಅವರು 'ಬೇಸಿಗೆ ಎದುರಿಸಲು' ಮಾರ್ಗಸೂಚಿ ಬಗ್ಗೆ ಮಾಹಿತಿ ನೀಡಿದ್ದಾರೆ. ಬಾಯಾರಿಕೆ ಇಲ್ಲದಿದ್ದರೂ ಹೆಚ್ಚಾಗಿ ನೀರು ಕುಡಿಯುವುದು, ಹಗುರವಾದ ಹಾಗೂ ತಿಳಿ ಬಣ್ಣದ ಹತ್ತಿ ಬಟ್ಟೆಗಳನ್ನು ಧರಿಸುವುದು ಉತ್ತಮ.




ಬಿಸಿಲಿಗೆ ಹೊರಡುವಾಗ ಛತ್ರಿ, ಟೋಪಿ, ರಕ್ಷಣಾತ್ಮಕ ಕಣ್ಣಿನ ಕನ್ನಡಕಗಳನ್ನು ಬಳಸಬೇಕು. ಸಾಧ್ಯವಾದರೆ ದೂರ ಪ್ರಯಾಣವನ್ನು ರಾತ್ರಿ ವೇಳೆ ಮಾಡುವುದು ಉತ್ತಮ. ಹೊರಗೆ ಕೆಲಸ ಮಾಡುವವರು ತಲೆ, ಕುತ್ತಿಗೆ ಮತ್ತು ಮುಖವನ್ನು ರಕ್ಷಿಸುವ ಕ್ರಮಗಳನ್ನು ಕೈಗೊಳ್ಳಬೇಕು.

ದೇಹವನ್ನು ತಂಪಾಗಿಡಲು ಲಸ್ಸಿ, ಶರಬತ್, ನಿಂಬೆ ನೀರು, ಮಜ್ಜಿಗೆ ಮೊದಲಾದ ಮನೆಮದ್ದು ಪಾನೀಯಗಳನ್ನು ಸೇವಿಸುವುದು ಆರೋಗ್ಯಕರ ಎಂದು ಪ್ರಾಧಿಕಾರ ಮಾರ್ಗಸೂಚಿಯಲ್ಲಿ ಹೆಲ್ತ್ ಟಿಪ್ಸ್ ನೀಡಿದೆ.

### ನೀರಿನಾಂಶದ ಪದಾರ್ಥ ಸೇವನೆ:

ಹೆಚ್ಚಿನ ನೀರಿನ ಅಂಶ ಹೊಂದಿರುವ ಕಲ್ಲಂಗಡಿ, ಕರಬೂಜ, ಕಿತ್ತಳೆ, ದ್ರಾಕ್ಷಿ, ಅನಾನಸ್, ಸೌತೆಕಾಯಿ ಹಾಗೂ ಎಳನೀರನ್ನು ಹೆಚ್ಚು ಸೇವಿಸುವುದು ಆರೋಗ್ಯಕ್ಕೆ ಒಳ್ಳೆಯದು ಎಂದು ಪ್ರಾಧಿಕಾರ ಸಲಹೆ ನೀಡಿದೆ.

### ಇರಲಿ ಜಾಗೃತಿ:

ಪ್ರಾಣಿ ಮತ್ತು ಪಕ್ಷಿಗಳನ್ನು ನೆರಳಿನಲ್ಲಿ ಇರಿಸಿ, ಅವುಗಳಿಗೆ ಸಾಕಷ್ಟು ಕುಡಿಯುವ ನೀರು ಒದಗಿಸಬೇಕು. ನವಜಾತ ಶಿಶುಗಳು, ಚಿಕ್ಕ ಮಕ್ಕಳು, ಗರ್ಭಿಣಿಯರು, ಹೊರಾಂಗಣದಲ್ಲಿ ಕೆಲಸ ಮಾಡುವವರು ಹಾಗೂ ಹೃದ್ರೋಗ ಮತ್ತು ರಕ್ತದೊತ್ತಡ ಸಮಸ್ಯೆ ಹೊಂದಿರುವವರು ವಿಶೇಷ ಜಾಗ್ರತೆ ವಹಿಸಬೇಕು. ಮೂರ್ಛೆ ಅಥವಾ ಅನಾರೋಗ್ಯ ಲಕ್ಷಣ ಕಂಡುಬಂದರೆ ತಕ್ಷಣ ವೈದ್ಯರನ್ನು ಸಂಪರ್ಕಿಸಬೇಕೆಂದು ಜಿಲ್ಲಾಧಿಕಾರಿ ಶುಭಾ ಕಲ್ಯಾಣ್ ತಿಳಿಸಿದ್ದಾರೆ.

### ಸಾರ್ವಜನಿಕರು ಏನು ಮಾಡಬೇಕು?

ಬಿಸಿಲಿನ ಕುರಿತು ಮುನ್ಸೂಚನೆಗಳನ್ನು ಗಮನಿಸಿ
ದಿನಕ್ಕೆ ಸಾಕಷ್ಟು ನೀರು ಕುಡಿಯಿರಿ
ತಿಳಿ ಬಣ್ಣದ ಹಗುರವಾದ ಹತ್ತಿ ಬಟ್ಟೆ ಧರಿಸಿ
ಛತ್ರಿ, ಟೋಪಿ, ಕನ್ನಡಕ ಬಳಸಿ
ಲಸ್ಸಿ, ಮಜ್ಜಿಗೆ, ನಿಂಬೆ ನೀರು ಸೇವಿಸಿ
ಕಲ್ಲಂಗಡಿ, ಕರಬೂಜ ಮೊದಲಾದ ಹಣ್ಣುಗಳನ್ನು ಸೇವಿಸಿ
ಪ್ರಾಣಿ–ಪಕ್ಷಿಗಳಿಗೆ ನೆರಳು ಮತ್ತು ನೀರು ಒದಗಿಸಿ
ಮನೆಗಳಲ್ಲಿ ಪರದೆ, ಸನ್‌ಶೇಡ್ ಬಳಸಿ ತಂಪಾಗಿರಿಸಿ

### ಏನು ಮಾಡಬಾರದು?

ಮಕ್ಕಳು ಅಥವಾ ಸಾಕು ಪ್ರಾಣಿಗಳನ್ನು ಬಿಸಿಲಿನಲ್ಲಿರುವ ವಾಹನಗಳಲ್ಲಿಬಿಡಬೇಡಿ
ಮಧ್ಯಾಹ್ನ 12ರಿಂದ 3ರವರೆಗೆ ಹೊರಗೆ ಕೆಲಸ ಮಾಡುವುದನ್ನು ತಪ್ಪಿಸಿ
ಕಪ್ಪು ಅಥವಾ ಬಿಗಿಯಾದ ಬಟ್ಟೆಗಳನ್ನು ಧರಿಸಬೇಡಿ
ಆಲ್ಕೊ□ಹಾಲ್, ಹೆಚ್ಚು ಚಹಾ–ಕಾಫಿ, ತಂಪು ಪಾನೀಯಗಳನ್ನು ತಪ್ಪಿಸಿ ಹಳಸಿದ ಅಥವಾ ಅಸ್ವಚ್ಛ ಆಹಾರ ಸೇವಿಸಬೇಡಿ
ಚಪ್ಪಲಿ ಇಲ್ಲದೆ ಬಿಸಿಲಿಗೆ ಹೊರಹೋಗುವುದು ಗಮನಿಸಿ
ಸಾಮಾನ್ಯಕ್ಕಿಂತ ಹೆಚ್ಚಿನ ತಾಪಮಾನ ಸಾಧ್ಯತೆ
ಹೀಟ್ ವೇವ್‌ನಿಂದ ಆರೋಗ್ಯ ಸಮಸ್ಯೆಗಳ ಆತಂಕ
ನೀರು ಮತ್ತು ತಂಪು ಪಾನೀಯ ಸೇವನೆಗೆ ಒತ್ತು
ಮಕ್ಕಳು, ಗರ್ಭಿಣಿಯರು, ವೃದ್ಧರ ಬಗ್ಗೆ ಇರಲಿ ವಿಶೇಷ ಕಾಳಜಿ
ಹೀಟ್ ವೇವ್ ಲಕ್ಷಣಗಳು
ತೀವ್ರದಾಹ, ದೌರ್ಬಲ್ಯ ತಲೆನೋವು, ತಲೆತಿರುಗು ವಾಕರಿಕೆ, ವಾಂತಿ ಹೆಚ್ಚು ಜ್ವರ, ಪ್ರಜ್ಞೆ ತಪ್ಪುವುದು ಪ್ರಥಮ ಚಿಕಿತ್ಸೆ ವ್ಯಕ್ತಿಯನ್ನು ತಕ್ಷಣ



ನೆರಳಿನ ತಂಪಾದ ಸ್ಥಳಕ್ಕೆ ಕರೆದೊಯ್ಯಿರಿ
ಒದ್ದೆಯಾದ ಬಟ್ಟೆಯಿಂದ ದೇಹ ತಂಪಾಗಿಸಿರಿ ನೀರು ಅಥವಾ ಒಆರ್‌ಎಸ್, ನಿಂಬೆ ಪಾನಕ ನೀಡಿ ತಂಪಾದ ಗಾಳಿಯ ವ್ಯವಸ್ಥೆ ಮಾಡಿರಿ ಸುಸ್ತು ಸೇರಿದಂತೆ ಹೀಟ್ ವೇವ್ ಲಕ್ಷಣ ಕಂಡುಬಂದರೆ ಕೂಡಲೇ ವೈದ್ಯರನ್ನು ಸಂಪರ್ಕಿಸಿ

ಈ ವರ್ಷ ಬೇಸಿಗೆ ಅವಧಿಯಲ್ಲಿ ತಾಪಮಾನ ಸಾಮಾನ್ಯಕ್ಕಿಂತ ಹೆಚ್ಚಾಗುವ ಸಾಧ್ಯತೆಯಿದೆ. ಹೀಟ್ ವೇವ್ ಸ್ಟ್ರೋಕ್‌ನಿಂದ ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಉಂಟಾಗಬಹುದು. ಈ ಹಿನ್ನೆಲೆಯಲ್ಲಿವಿಪತ್ತು ನಿರ್ವಹಣಾ ಪ್ರಾಧಿಕಾರದಿಂದ ಸಲಹೆ ಮಾರ್ಗಸೂಚಿ ನೀಡಲಾಗಿದೆ. ಜನ ತಮ್ಮ ಆರೋಗ್ಯ ರಕ್ಷಣೆಗಾಗಿ ಇವುಗಳನ್ನು ಅನುಸರಿಸಬೇಕು. ಪ್ರಮುಖವಾಗಿ ಸಾಕಷ್ಟು ನೀರು ಕುಡಿಯಿರಿ. ಆರೋಗ್ಯ ಸಮಸ್ಯೆ ಕಂಡುಬಂದರೆ ಕೂಡಲೇ ವೈದ್ಯರನ್ನು ಸಂಪರ್ಕಿಸಿ.

– ಶುಭಾ ಕಲ್ಯಾಣ್, ಜಿಲ್ಲಾಧಿಕಾರಿ ಮತ್ತು ಜಿಲ್ಲಾವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷೆ

# ಕೃಷಿ ಇಲಾಖೆಯಿಂದ ಪರ್ಯಾಯ ರಸಗೊಬ್ಬರ ಬಳಕೆ ಕುರಿತು ರೈತರಿಗೆ ಸಲಹೆ

ತುಮಕೂರು: ಡಿ.ಎ.ಪಿ./ಯೂರಿಯಾ ರಸಗೊಬ್ಬರಕ್ಕೆ ಪರ್ಯಾಯವಾಗಿ ಸಂಯುಕ್ತ ರಸಗೊಬ್ಬರಗಳ ಬಳಕೆ ಕುರಿತು ಕೃಷಿ ಇಲಾಖೆಯಿಂದ ರೈತರಿಗೆ ಸಲಹೆ ನೀಡಲಾಗಿದೆ.

ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಗೆ ಹದಿನೇಳು ಪೋಷಕಾಂಶಗಳ ಅಗತ್ಯವಿರುತ್ತದೆ. ಇವುಗಳಲ್ಲಿ ಇಂಗಾಲ, ಜಲಜನಕ ಮತ್ತು ಆಮ್ಲಜನಕವು ಸ್ವಾಭಾವಿಕವಾಗಿ ದೊರೆಯಲಿದ್ದು, ಗಾಳಿ ಮತ್ತು ನೀರಿನ ಮೂಲಕ ಸಸ್ಯಗಳಿಗೆ ಲಭ್ಯವಾಗುತ್ತವೆ. ಉಳಿದ ಹದಿನಾಲ್ಕು ಪೋಷಕಾಂಶಗಳಲ್ಲಿ ಸಾರಜನಕ, ರಂಜಕ, ಪೊಟ್ಯಾಷ್ ಹೆಚ್ಚಿನ ಪ್ರಮಾಣದಲ್ಲಿ ಬೇಕಿದ್ದು, ಇವುಗಳನ್ನು ಪ್ರಧಾನ ಪೋಷಕಾಂಶಗಳೆಂದು, ಕಾಲ್ಸಿಯಂ, ಮೆಗ್ನೀಷಿಯಂ, ಗಂಧಕ, ಕಬ್ಬಿಣ, ಜಿಂಕ್, ಬೋರಾನ್, ತಾಮ್ರ, ಮ್ಯಾಂಗನೀಸ್, ಮಾಲಿಬ್ಡಿನಂ, ಕ್ಲೋರಿನ್ ಮತ್ತು ನಿಕಲ್ ಕಡಿಮೆ ಪ್ರಮಾಣದಲ್ಲಿ ಬೇಕಿದ್ದು, ಇವುಗಳನ್ನು ಲಘು ಪೋಷಕಾಂಶಗಳೆಂದು ವಿಂಗಡಿಸಲಾಗಿದೆ. ಇವುಗಳಲ್ಲಿ ಯಾವುದೇ ಒಂದು ಪೋಷಕಾಂಶದ ಕೊರತೆಯಾದರೂ ಸಸ್ಯಗಳ ಬೆಳವಣಿಗೆ ಮತ್ತು ಅಭಿವೃದ್ಧಿಯ ಮೇಲೆ ಪರಿಣಾಮ ಬೀರಿ ಇಳುವರಿ ಕುಂಠಿತವಾಗುತ್ತದೆ.



ಪ್ರಧಾನ ಪೋಷಕಾಂಶಗಳು ಮತ್ತು ಲಘು ಪೋಷಕಾಂಶಗಳಿಗೆ ಭೂಮಿಯೇ ಮುಖ್ಯ ಆಧಾರ. ಮಣ್ಣಿನಿಂದ ಎಲ್ಲಾ ಪೋಷಕಾಂಶಗಳು ಬೆಳೆಗಳಿಗೆ ಬೇಕಾದ ಪ್ರಮಾಣದಲ್ಲಿ ದೊರೆಯುವುದಿಲ್ಲವಾದ್ದರಿಂದ ಬಾಹ್ಯವಾಗಿ ನೀಡುವುದು ಅನಿವಾರ್ಯ. ಬೆಳೆಗಳಿಗೆ ಬೇಕಾಗುವ ಈ ಬಾಹ್ಯ ಪೋಷಕಾಂಶಗಳನ್ನು ಸಾವಯವ (ಕೊಟ್ಟಿಗೆ ಗೊಬ್ಬರ, ಹಸಿರೆಲೆ ಗೊಬ್ಬರ, ಹಿಂಡಿ ಇತ್ಯಾದಿ) ಮತ್ತು ರಸಗೊಬ್ಬರಗಳಿಂದ ಒದಗಿಸಬೇಕಾಗಿದ್ದು, ರಸಗೊಬ್ಬರಗಳಲ್ಲಿ ಪೋಷಕಾಂಶಗಳು ಹೆಚ್ಚಿನ ಪ್ರಮಾಣದಲ್ಲಿ ಮತ್ತು ನೇರವಾಗಿ ದೊರೆಯುವ ರೂಪದಲ್ಲಿದ್ದು, ಅವುಗಳ ಬಳಕೆ ಅಗತ್ಯವಾಗಿರುತ್ತದೆ.

ರೈತರು ಕೇವಲ ಒಂದು ಅಥವಾ ಎರಡು ಪೋಷಕಾಂಶ ಒದಗಿಸುವ ಯೂರಿಯಾ ಹಾಗೂ ಡಿ.ಎ.ಪಿ.ಯನ್ನು ರೂಢಿಗತವಾಗಿ ಬಳಸುತ್ತಿದ್ದು, ಇವುಗಳಲ್ಲಿ ಸಾರಜನಕ ಮತ್ತು ರಂಜಕದ ಅಂಶ ಮಾತ್ರವಿರುತ್ತದೆ. ಆದರೆ ಬೆಳೆಗಳಿಗೆ ಬರ ಮತ್ತು ರೋಗ ನಿರೋಧಕ ಶಕ್ತಿ ನೀಡಿ ಕಾಳಿನ ತೂಕ ಹೆಚ್ಚಿಸಲು ಅತ್ಯಂತ ಅವಶ್ಯಕವಾಗಿರುವ ಪೊಟ್ಯಾಷ್ ಲಭ್ಯವಿರುವುದಿಲ್ಲ. ಮಾರುಕಟ್ಟೆಯಲ್ಲಿ ವಿವಿಧ ಶ್ರೇಣಿಯ (ಗ್ರೇಡ್) ಸಾರಜನಕ, ರಂಜಕ ಮತ್ತು ಪೊಟ್ಯಾಷ್ ಯುಕ್ತ ಬಹಳಷ್ಟು ರಸಗೊಬ್ಬರಗಳು ಲಭ್ಯವಿದ್ದು, ಶಿಫಾರಸ್ಸಿನಂತೆ ವಿವಿಧ ರಸಗೊಬ್ಬರಗಳ ಸಂಯೋಜನೆಯೊಂದಿಗೆ ಬಳಸಬಹುದಾಗಿದೆ. ಶಿಫಾರಸ್ಸಿನಂತೆ ಬೆಳೆಗಳಿಗೆ ಸಾರಜನಕ: ರಂಜಕ: ಪೊಟ್ಯಾಶ್ ರಸಗೊಬ್ಬರಗಳನ್ನು 4:2:1ರ ಅನುಪಾತದಲ್ಲಿ ಬಳಸಬೇಕಾಗಿರುತ್ತದೆ. ಆದರೆ ಇತ್ತೀಚಿನ ವರ್ಷಗಳಲ್ಲಿ ರೈತರು ಬಳಸುತ್ತಿರುವ ರಸಗೊಬ್ಬರಗಳ ಅನುಪಾತವು ರಾಜ್ಯದಲ್ಲಿ 5:3:1 ಆಗಿರುತ್ತದೆ. ಇದನ್ನು ಸಮತೋಲನಾತ್ಮಕ ರಸಗೊಬ್ಬರಗಳ ಬಳಕೆಯನ್ನು ಉತ್ತೇಜಿಸಲು ಪೊಟ್ಯಾಷ್ ಯುಕ್ತ ಸಂಯುಕ್ತ ರಸಗೊಬ್ಬರಗಳ ಬಳಕೆಯನ್ನು ಪ್ರೇರೇಪಿಸುವುದು ಮುಖ್ಯವಾಗಿರುತ್ತದೆ. ಅಲ್ಲದೆ ರೈತರು ರಸಗೊಬ್ಬರವನ್ನು ಕೇವಲ ಒಂದೇ ಸಂಸ್ಥೆಯ ಅಥವಾ ಒಂದೇ ರಸಗೊಬ್ಬರಕ್ಕೆ ಆದ್ಯತೆ ನೀಡದೆ, ಡಿ.ಎ.ಪಿ/ಯೂರಿಯಾ ರಸಗೊಬ್ಬರಕ್ಕೆ ಪರ್ಯಾಯವಾಗಿ ಗಂಧಕ ಒದಗಿಸುವ 20:20:0:13 ಹಾಗೂ ಪೊಟ್ಯಾಷ್ ಒದಗಿಸುವ ಇತರೆ ಸಂಯುಕ್ತ ರಸಗೊಬ್ಬರಗಳಾದ 15:15:15, 10:26:26, 12:32:16, 22:22:11, 14:35:14, 17:17:17, 14:28:14, 19:19:19, 20:10:10 ಇತ್ಯಾದಿ ರಸಗೊಬ್ಬರಗಳನ್ನೂ ಸಹ ಬಳಸಬಹುದಾಗಿದೆ ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# ಅಳುನವರ ಆರಾಧ್ಯ ದೈವ ಪ್ರಸಿದ್ಧ ಶ್ರೀ ದಿಬ್ಬದ ವೀರ ಬೊಮ್ಮಣ್ಣ ಸ್ವಾಮಿ ಕಲ್ಲುಗಾಲಿ ರಥೋತ್ಸವ

ಶಿರಾ : ಮಾ .31 ರ ಮಂಗಳವಾರ ರಾತ್ರಿ 11. ಗಂಟೆಗೆ ಶಿರಾ ತಾಲೂಕಿನ ಹುಲಿಕುಂಟೆ ಹೋಬಳಿಯ ವೀರ ಬೊಮ್ಮನಹಳ್ಳಿ ಗ್ರಾಮದ ಅಳುನವರ ಆರಾಧ್ಯ ದೈವ ಪ್ರಸಿದ್ಧ ಶ್ರೀ ದಿಬ್ಬದ ವೀರ ಬೊಮ್ಮಣ್ಣ ಸ್ವಾಮಿ ಕಲ್ಲುಗಾಲಿ ರಥೋತ್ಸವ ನಡೆಯಲಿದ್ದು, ಸ್ಪಟಿಕಪುರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ನಂಜಾವಧೂತ ಸ್ವಾಮೀಜಿಗಳ ದಿವ್ಯ ಸಾನಿಧ್ಯದಲ್ಲಿ ವಹಿಸಲಿದ್ದಾರೆ. ತಮಿಳುನಾಡು, ಆಂಧ್ರ ಪ್ರದೇಶ ಸೇರಿದಂತೆ ರಾಜ್ಯದ ನಾನಾ ಜಿಲ್ಲೆಗಳ ಸಾವಿರಾರು ಭಕ್ತರು ಈ ರಥೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಮಾ.27 ರಂದು ಶ್ರೀ ದಿಬ್ಬದ ವೀರ ಬೊಮ್ಮಣ್ಣ ಸ್ವಾಮಿ ಜಲಧಿ ಮಹೋತ್ಸವದಿಂದ ಪ್ರಾರಂಭವಾಗುವ ಶ್ರೀ ದಿಬ್ಬದ ವೀರ ಬೊಮ್ಮಣ್ಣ ಸ್ವಾಮಿ ಜಾತ್ರಾ ಮಹೋತ್ಸವ ಏ.1. ಬುಧವಾರದವರೆಗೆ ನಡೆಯಲಿದೆ. ಮಾ.28. ಶನಿವಾರ ಭಜನೆ ಕಾರ್ಯಕ್ರಮ, ಮಾ.29 ರ ಭಾನುವಾರ ಧೂಪ ಸೇವೆ ಹಾಗೂ ದೀಪಾ ಆರಾಧನೆ, ಮಾ.30. ರಾ ಸೋಮವಾರ ರಾತ್ರಿ 7. ಗಂಟೆಗೆ ರಸಮಂಜರಿ ಕಾರ್ಯಕ್ರಮ ನಡೆಯಲಿದ್ದು, ಮಾ.31. ಮಂಗಳವಾರ ರಾತ್ರಿ 11. ಗಂಟೆಗೆ ಶ್ರೀ ದಿಬ್ಬದ ವೀರ ಬೊಮ್ಮಣ್ಣ ಸ್ವಾಮಿ ಕಲ್ಲುಗಾಲಿ ರಥೋತ್ಸವ ನಡೆಯಲಿದೆ.

ಜಾತ್ರಾ ಮಹೋತ್ಸವಕ್ಕೆ ಆಗಮಿಸುವ ಭಕ್ತರಿಗೆ ಅನ್ನದಾಸೋಹ ಏರ್ಪಡಿಸಲಾಗಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಂಡು ಜಾತ್ರಾ ಮಹೋತ್ಸವ ಯಶಸ್ವಿಗೊಳಿಸುವಂತೆಶಿರಾ : ಮಾ .31 ರ ಮಂಗಳವಾರ ರಾತ್ರಿ 11. ಗಂಟೆಗೆ ಶಿರಾ ತಾಲೂಕಿನ ಹುಲಿಕುಂಟೆ ಹೋಬಳಿಯ ವೀರ ಬೊಮ್ಮನಹಳ್ಳಿ ಗ್ರಾಮದ ಅಳುನವರ ಆರಾಧ್ಯ ದೈವ ಪ್ರಸಿದ್ಧ ಶ್ರೀ ದಿಬ್ಬದ ವೀರ ಬೊಮ್ಮಣ್ಣ ಸ್ವಾಮಿ ಕಲ್ಲುಗಾಲಿ ರಥೋತ್ಸವ ನಡೆಯಲಿದ್ದು, ಸ್ಪಟಿಕಪುರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ನಂಜಾವಧೂತ ಸ್ವಾಮೀಜಿಗಳ ದಿವ್ಯ ಸಾನಿಧ್ಯದಲ್ಲಿ ವಹಿಸಲಿದ್ದಾರೆ. ತಮಿಳುನಾಡು, ಆಂಧ್ರ ಪ್ರದೇಶ ಸೇರಿದಂತೆ ರಾಜ್ಯದ ನಾನಾ ಜಿಲ್ಲೆಗಳ ಸಾವಿರಾರು ಭಕ್ತರು ಈ ರಥೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.



ಮಾ.27 ರಂದು ಶ್ರೀ ದಿಬ್ಬದ ವೀರ ಬೊಮ್ಮಣ್ಣ ಸ್ವಾಮಿ ಜಲಧಿ ಮಹೋತ್ಸವದಿಂದ ಪ್ರಾರಂಭವಾಗುವ ಶ್ರೀ ದಿಬ್ಬದ ವೀರ ಬೊಮ್ಮಣ್ಣ ಸ್ವಾಮಿ ಜಾತ್ರಾ ಮಹೋತ್ಸವ ಏ.1. ಬುಧವಾರದವರೆಗೆ ನಡೆಯಲಿದೆ. ಮಾ.28. ಶನಿವಾರ ಭಜನೆ ಕಾರ್ಯಕ್ರಮ, ಮಾ.29 ರ ಭಾನುವಾರ ಧೂಪ ಸೇವೆ ಹಾಗೂ ದೀಪಾ ಆರಾಧನೆ, ಮಾ.30. ರಾ ಸೋಮವಾರ ರಾತ್ರಿ 7. ಗಂಟೆಗೆ ರಸಮಂಜರಿ ಕಾರ್ಯಕ್ರಮ ನಡೆಯಲಿದ್ದು, ಮಾ.31. ಮಂಗಳವಾರ ರಾತ್ರಿ 11. ಗಂಟೆಗೆ ಶ್ರೀ ದಿಬ್ಬದ ವೀರ ಬೊಮ್ಮಣ್ಣ ಸ್ವಾಮಿ ಕಲ್ಲುಗಾಲಿ ರಥೋತ್ಸವ ನಡೆಯಲಿದೆ.

ಜಾತ್ರಾ ಮಹೋತ್ಸವಕ್ಕೆ ಆಗಮಿಸುವ ಭಕ್ತರಿಗೆ ಅನ್ನದಾಸೋಹ ಏರ್ಪಡಿಸಲಾಗಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಂಡು ಜಾತ್ರಾ ಮಹೋತ್ಸವ ಯಶಸ್ವಿಗೊಳಿಸುವಂತೆ.ಶಿರಾ : ಮಾ .31 ರ ಮಂಗಳವಾರ ರಾತ್ರಿ 11. ಗಂಟೆಗೆ ಶಿರಾ ತಾಲೂಕಿನ ಹುಲಿಕುಂಟೆ ಹೋಬಳಿಯ ವೀರ ಬೊಮ್ಮನಹಳ್ಳಿ ಗ್ರಾಮದ ಅಳುನವರ ಆರಾಧ್ಯ ದೈವ ಪ್ರಸಿದ್ಧ ಶ್ರೀ ದಿಬ್ಬದ ವೀರ ಬೊಮ್ಮಣ್ಣ ಸ್ವಾಮಿ ಕಲ್ಲುಗಾಲಿ ರಥೋತ್ಸವ ನಡೆಯಲಿದ್ದು, ಸ್ಪಟಿಕಪುರಿ ಮಹಾಸಂಸ್ಥಾನ ಮಠದ ಪೀಠಾಧ್ಯಕ್ಷರಾದ ಶ್ರೀ ನಂಜಾವಧೂತ ಸ್ವಾಮೀಜಿಗಳ ದಿವ್ಯ ಸಾನಿಧ್ಯದಲ್ಲಿ ವಹಿಸಲಿದ್ದಾರೆ. ತಮಿಳುನಾಡು, ಆಂಧ್ರ ಪ್ರದೇಶ ಸೇರಿದಂತೆ ರಾಜ್ಯದ ನಾನಾ ಜಿಲ್ಲೆಗಳ ಸಾವಿರಾರು ಭಕ್ತರು ಈ ರಥೋತ್ಸವ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಮಾ.27 ರಂದು ಶ್ರೀ ದಿಬ್ಬದ ವೀರ ಬೊಮ್ಮಣ್ಣ ಸ್ವಾಮಿ ಜಲಧಿ ಮಹೋತ್ಸವದಿಂದ ಪ್ರಾರಂಭವಾಗುವ ಶ್ರೀ ದಿಬ್ಬದ ವೀರ ಬೊಮ್ಮಣ್ಣ ಸ್ವಾಮಿ ಜಾತ್ರಾ ಮಹೋತ್ಸವ ಏ.1. ಬುಧವಾರದವರೆಗೆ ನಡೆಯಲಿದೆ. ಮಾ.28. ಶನಿವಾರ ಭಜನೆ ಕಾರ್ಯಕ್ರಮ, ಮಾ.29 ರ ಭಾನುವಾರ ಧೂಪ ಸೇವೆ ಹಾಗೂ ದೀಪಾ ಆರಾಧನೆ, ಮಾ.30. ರಾ ಸೋಮವಾರ ರಾತ್ರಿ 7. ಗಂಟೆಗೆ ರಸಮಂಜರಿ ಕಾರ್ಯಕ್ರಮ ನಡೆಯಲಿದ್ದು, ಮಾ.31. ಮಂಗಳವಾರ ರಾತ್ರಿ 11. ಗಂಟೆಗೆ ಶ್ರೀ ದಿಬ್ಬದ ವೀರ ಬೊಮ್ಮಣ್ಣ ಸ್ವಾಮಿ ಕಲ್ಲುಗಾಲಿ ರಥೋತ್ಸವ ನಡೆಯಲಿದೆ.

ಜಾತ್ರಾ ಮಹೋತ್ಸವಕ್ಕೆ ಆಗಮಿಸುವ ಭಕ್ತರಿಗೆ ಅನ್ನದಾಸೋಹ ಏರ್ಪಡಿಸಲಾಗಿದ್ದು ಹೆಚ್ಚಿನ ಸಂಖ್ಯೆಯಲ್ಲಿ ಭಕ್ತರು ಪಾಲ್ಗೊಂಡು ಜಾತ್ರಾ ಮಹೋತ್ಸವ ಯಶಸ್ವಿಗೊಳಿಸುವಂತೆ. ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಎಚ್. ಗಂಗಾಧರಯ್ಯ, ಮುಖಂಡರಾದ ಡಿ. ನಾಗರಾಜ್, ಡಿ. ಜಗದೀಶ್, ಎಚ್. ಶ್ರೀಧರ್, ತಿಪ್ಪೇಸ್ವಾಮಿ, ಗೌಡರ ನಾಗರಾಜ್, ನಾರಾಯಣಪ್ಪ, ಬಂಡಿಕಾರ್ ನಾಗಭೂಷಣ್, ಶಿವಕುಮಾರ್, ಪ್ರಕಾಶ್, ಗುರುಗಳಾದ ಬಸವರಾಜ್, ರಂಗನಾಥ್, ಈರಣ್ಣ ಕೊರೆವ್ ನಾಗರಾಜ್ ಹಾಗೂ ಹಳೆ ಪೂಜಾರ್ ವಂಶಸ್ಥರು ಹಾಗೂ ಅಣ್ಣತಮ್ಮಂದಿರು ಮನವಿ ಮಾಡಿದರು.

# ಬೆಂಗಳೂರು ನಮ್ಮ ಮೆಟ್ರೋ ನೀಲಿ ಮಾರ್ಗಕ್ಕೆ ಶೀಘ್ರ 2 ರೈಲು; ಸಿಲ್ಕ್ ಬೋರ್ಡ್– ಕೆಆರ್ ಪುರ ನಡುವೆ ಸಂಚಾರಕ್ಕೆ ಬಳಕೆ

ಬೆಂಗಳೂರು ನಮ್ಮ ಮೆಟ್ರೋ ನೀಲಿ ಮಾರ್ಗಕ್ಕೆ ಶೀಘ್ರ 2 ರೈಲುಗಳು ಪೂರೈಕೆಯಾಗಲಿವೆ. ಸಿಲ್ಕ್ ಬೋರ್ಡ್– ಕೆಆರ್ ಪುರ ನಡುವೆ ಸಂಚಾರಕ್ಕೆ ಬಳಕೆ ಮಾಡಲಾಗುತ್ತದೆ. ಬಿಇಎಂಎಲ್ ಈ ಚಾಲಕ ರಹಿತ ರೈಲುಗಳನ್ನು ನಿರ್ಮಿಸಿದೆ. ವರ್ಷಾಂತ್ಯಕ್ಕೆ ನೀಲಿ ಮಾರ್ಗದಲ್ಲಿ ಸಂಚಾರ ಆರಂಭಿಸಲು ಉದ್ದೇಶಿಸಲಾಗಿದ್ದು, ರೈಲು ಪರೀಕ್ಷೆಯನ್ನು ಶೀಘ್ರವೇ ಪ್ರಾರಂಭ ಮಾಡಲು ಮುಂದಾಗಿದೆ.

ಬೆಂಗಳೂರು: ಹೊರವರ್ತುಲ ರಸ್ತೆಯಲ್ಲಿ ಸಾಗುವ ನಮ್ಮ ಮೆಟ್ರೋ ನೀಲಿ ಮಾರ್ಗ ಸೆಂಟ್ರಲ್ ಸಿಲ್ಕ್ ಬೋರ್ಡ್– ಕೆಆರ್ ಪುರ ಮಾರ್ಗಕ್ಕೆ ಬಿಇಎಂಎಲ್ ಎರಡು ತಿಂಗಳಲ್ಲಿ ಚಾಲಕ ರಹಿತವಾಗಿ ಸಂಚರಿಸುವ ಸಾಮರ್ಥ್ಯದ ಎರಡು ರೈಲನ್ನು ಪೂರೈಸಲಿದೆ.

ಮೇ ತಿಂಗಳ ಒಳಗಾಗಿ ಬೈಯಪ್ಪನಹಳ್ಳಿ ಮೆಟ್ರೋ ಡಿಪೋಗೆ ಎರಡು ರೈಲನ್ನು ತರುವ ಪ್ರಯತ್ನ ಮಾಡಲಿದ್ದ□ವೆ. ಈ ರೈಲುಗಳು ಸುಮಾರು 5 ತಿಂಗಳ ಕಾಲ ವಿವಿಧ ತಪಾಸಣೆಗೆ ಒಳಗಾಗಲಿವೆ ಎಂದು ಬಿಎಂಆರ್‌ಸಿಎಲ್ ಮೂಲಗಳು ತಿಳಿಸಿವೆ.

19.75 ಕಿಮೀ. ಉದ್ದದ ಈ ಮಾರ್ಗವನ್ನು ಇದೇ ಡಿಸೆಂಬರ್ ಅಂತ್ಯದಲ್ಲಿ ತೆರೆಯಲು ರಾಜ್ಯ ಸರಕಾರ ಉದ್ದ□ಶಿಸಿದೆ. ಮುಂದುವರಿದು ನೀಲಿ ಮಾರ್ಗದ 2ಬಿ ಕಾರಿಡಾರ್ ಕೆ.ಆರ್.ಪುರದಿಂದ ಕೆಂಪೇಗೌಡ ಅಂತಾರಾಷ್ಟ್ರೀಯ ವಿಮಾನ ನಿಲ್ದಾಣ ಸಂಪರ್ಕಿಸುವ 38 ಕಿಮೀ ಮಾರ್ಗವನ್ನು ಮುಂದಿನ ವರ್ಷ ಡಿಸೆಂಬರ್‌ಗೆ ಮುಕ್ತಗೊಳಿಸಲು ಉದ್ದ□ಶಿಸಲಾಗಿದೆ.



**ಸೆಂಟ್ರಲ್ ಸಿಲ್ಕ್ ಬೋರ್ಡ್– ಕೆಆರ್ ಪುರ ಮಾರ್ಗದಲ್ಲಿ ಮೊದಲು ರೈಲು?**

ಸೆಂಟ್ರಲ್ ಸಿಲ್ಕ್ ಬೋರ್ಡ್– ಕೆಆರ್ ಪುರ ಒಆರ್‌ಆರ್ ಮಾರ್ಗದಲ್ಲಿ ಹೆಚ್ಚಿನ ಟೆಕ್ ಕಂಪನಿಗಳು ಇರುವುದರಿಂದ ಸರಕಾರ ಈ ಹಂತದಲ್ಲಿ ಮೊದಲು ರೈಲು ಸೇವೆ ಆರಂಭಿಸಲು ಉದ್ದ□ಶಿಸಿದೆ. ಹೀಗಾಗಿ, ರೈಲು ಪರೀಕ್ಷೆಯನ್ನು ಶೀಘ್ರವೇ ಪ್ರಾರಂಭಿಸಲು ವ್ಯವಸ್ಥೆ ಮಾಡಿಕೊಳ್ಳಲು ಬಿಎಂಆರ್‌ಸಿಎಲ್‌ಗೆ ಸರಕಾರ ಸೂಚಿಸಿದೆ ಎಂದು ತಿಳಿದು ಬಂದಿದೆ.

**ಏನೆಲ್ಲಾ ಸೌಲಭ್ಯ?**

2023 ರಲ್ಲಿ ಬಿಇಎಂಎಲ್ 3117 ಕೋಟಿ ರೂ. ಮೊತ್ತದಲ್ಲಿ 318 ರೈಲು ಬೋಗಿಗಳನ್ನು ಬಿಎಂಆರ್‌ಸಿಎಲ್‌ಗೆ ಪೂರೈಸುವ ಗುತ್ತಿಗೆ ಪಡೆದಿತ್ತು. ಆರು ಬೋಗಿಗಳ ರೈಲಿನಲ್ಲಿ ನಾಲ್ಕು ಬೋಗಿಗಳಲ್ಲಿ ವಿಶೇಷವಾಗಿ ಲಗೇಜ್ ರ್ಯಾಕ್ ಇರಲಿದ್ದು, ಎರಡು ಸೀಟ್‌ಗಳನ್ನು ತೆಗೆದು ಆ ಜಾಗದಲ್ಲಿಈ ಸೌಲಭ್ಯ ಕಲ್ಪಿಸಲಾಗುತ್ತಿದೆ. ಜತೆಗೆ, ರೈಲುಗಳಲ್ಲಿಎಲ್‌ಸಿಡಿ ಸ್ಕ್ರೀನ್‌ನಲ್ಲಿ ಮೆಟ್ರೋ ಮಾರ್ಗವನ್ನೂ ಡಿಸ್‌ಪ್ಲೆ□ ಮಾಡಲಾಗುವುದು ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ತಿಳಿಸಿದರು.

**ಗುಲಾಬಿ ಮಾರ್ಗ ಮೇ ವೇಳೆಗೆ ಆರಂಭ**

ಬಿಇಎಂಎಲ್ ಕಾಳೇನ ಅಗ್ರಹಾರ– ನಾಗವಾರ ನಡುವಿನ ಗುಲಾಬಿ ಮಾರ್ಗ ಎಲಿವೇಟೆಡ್ ಕಾರಿಡಾರ್‌ಗಾಗಿ ಈಗಾಗಲೇ ಐದು ರೈಲುಗಳನ್ನು




ಪೂರೈಕೆ ಮಾಡಿದೆ. ಮೇ – ಜೂನ್ ಒಳಗಾಗಿ ಈ ಮಾರ್ಗವನ್ನು ಮುಕ್ತಗೊಳಿಸಲು ಬಿಎಂಆರ್‌ಸಿಎಲ್ ಉದ್ದ□ಶಿಸಿದೆ.

ಎಲೆಕ್ಟ್ರಾನಿಕ್ ಸಿಟಿ ಸಂಪರ್ಕಿಸುವ ಹಳದಿ ಮಾರ್ಗದಂತೆ (ಆರ್.ವಿ.ರಸ್ತೆ –ಬೊಮ್ಮಸಂದ್ರ) ಗುಲಾಬಿ ಹಾಗೂ ನೀಲಿ ಮಾರ್ಗದಲ್ಲೂಸಿಬಿಟಿಸಿ ( ಕಮ್ಯುನಿಕೇಶನ್ ಬೇಸ್ಡ್ ಟ್ರೆ□ನ್ ಕಂಟ್ರೊ□ಲ್) ತಂತ್ರಜ್ಞಾನದ ರೈಲುಗಳು ಸಂಚರಿಸಲಿವೆ. ತಾಂತ್ರಿಕವಾಗಿ ಪರಿಪೂರ್ಣ ನಂಬಿಕೆ ಬಂದ ಬಳಿಕವಷ್ಟೆ ರೈಲುಗಳನ್ನು ಚಾಲಕ ರಹಿತವಾಗಿ ಸಂಚರಿಸಲಾಗುವುದು ಎಂದು ಬಿಎಂಆರ್‌ಸಿಎಲ್ ಅಧಿಕಾರಿಗಳು ತಿಳಿಸಿದರು.

# ಕ್ರಿಕೆಟ್ ಪ್ರೇಮಿಗಳಿಗೆ ಉಚಿತವಾಗಿ ಬಿಸಿಸಿಐ ವತಿಯಿಂದ ಟಾಟಾ ಐಪಿಎಲ್ 2026 ಆರಂಭಿಕ ಎರಡು ಮ್ಯಾಚ್‌ಗಳ ನೇರ ಪ್ರಸಾರ:

ತುಮಕೂರು:ನಗರದಜೂನಿಯರ್‌ಕಾಲೇಜು ಮೈದಾನದಲ್ಲಿ ಬಿಸಿಸಿಐ ವತಿಯಿಂದಟಾಟಾ ಐಪಿಎಲ್2026 ಆರಂಭಿಕಎರಡು ಮ್ಯಾಚ್‌ಗಳ ನೇರ ಪ್ರಸಾರವನ್ನುಉಚಿತವಾಗಿದೊಡ್ಡ ಪರದೆಯ ಮೇಲೆ ಆಯೋಜಿಸಲಾಗಿದೆಎಂದು ಬಿಸಿಸಿಐನ ಅಲ್ವಿನ್‌ಗಾಯಕವಾಡ್ ತಿಳಿಸಿದ್ದಾರೆ.




ಸುದ್ದಿಗೋಷ್ಠಿಯಲ್ಲಿಂದು ಮಾತನಾಡಿದಅವರು,ಟಾಟಾಐಪಿಎಲ್ ಫ್ಯಾನ್ ಪಾರ್ಕು ಆಯೋಜಿಸಿರುವ ಈ ನೇರ ಪ್ರಸಾರಕಾರ್ಯಕ್ರಮದಲ್ಲಿ ಮಾರ್ಚ್28 ಶನಿವಾರ ಸಂಜೆ.7:30ಕ್ಕೆ ರಾಯಲ್‌ಚಾಲೆಂಜರ್ಸ್ ಬೆಂಗಳೂರು ಮತ್ತು ಸನ್‌ರೈಸರ್ ಹೈದ್ರಾಬಾದ್ ತಂಡಗಳ ನಡುವಿನ ಮ್ಯಾಚ್ ಹಾಗೂ ಮಾರ್ಚ್ 29 ರ ಭಾನುವಾರ ಸಂಜೆ 7:30ಕ್ಕೆ ಮುಂಬೈ ಇಂಡಿಯನ್ಸ್ ಮತ್ತುಕಲ್ಕತ್ತಾ ನೈಟ್‌ರೈಡರ್ಸ್ ತಂಡಗಳ ನಡುವಿನ ಮ್ಯಾಚ್‌ಉಚಿತವಾಗಿ ವಿಕ್ಷೀಸಲುಅವಕಾಶವಿದ್ದು, ಸುಮಾರು 10 ಸಾವಿರಜನರು ನೆಲದ ಮೇಲೆ ಕುಳಿತು ನೋಡಲು ಬೇಕಾದ ವ್ಯವಸ್ಥೆ ಮಾಡಿದ್ದು, ಸ್ಟೇಡಿಯಂನಲ್ಲಿಯ ಮ್ಯಾಚ್ ನೋಡುತ್ತಿರುವಅನುಭವ ನೀಡಲಿದೆಎಂದರು.

ಕ್ರಿಕೆಟ್ ನೋಡುಗರ ಸಂಖ್ಯೆಯನ್ನು ಹೆಚ್ಚು ಮಾಡುವ ನಿಟ್ಟಿನಲ್ಲಿ ಬಿಸಿಸಿಐ ದೇಶದಐವತ್ತು ಕಡೆಗಳಲ್ಲಿ ಈ ರೀತಿಯದೊಡ್ಡ ಪರದೆಗಳ ಮೂಲಕ ಕ್ರಿಕೆಟ್ ಪ್ರೇಮಿಗಳಿಗೆ ಉಚಿತವಾಗಿ ಮ್ಯಾಚ ವೀಕ್ಷಿಸುವ ಅವಕಾಶ ಕಲ್ಪಿಸಿದೆ. ಕರ್ನಾಟಕದ ಮೈಸೂರು ಮತ್ತುತುಮಕೂರಿನಲ್ಲಿಎರಡು ದಿನಗಳ ಕಾಲ ಮ್ಯಾಚ್ ನೋಡಬಹುದು. ಮ್ಯಾಚ್ ವೀಕ್ಷಿಸಲು ಬರುವಕ್ರಿಕೆಟ್ ಪ್ರಿಯರಿಗೆ ಏಳು ರೀತಿ ಮೋಜಿನ ಆಟಗಳ ಜೊತೆಗೆ, ಒಂದೊಂದು ಲಕ್ಕಿ ಕೂಪನ್ ವಿತರಿಸಲಾಗುವುದು. ಅಂತಿಮವಾಗಿ ಲಕ್ಕಿ ಕೂಪನ್‌ಡ್ರಾದಲ್ಲಿ ವಿಜೇತರಾದವರಿಗೆ ಬಿಸಿಸಿಐ ಅಧಿಕೃತಟೀ ಶರ್ಟ್ ನೀಡಲಾಗುವುದುಎಂದರು.

ಕಳೆದ ಎರಡು ವರ್ಷಗಳಿಂದ ತುಮಕೂರಿನ ಸರಕಾರಿಜೂನಿಯರ್‌ಕಾಲೇಜು ಮೈದಾನದಲ್ಲಿ ಬಿಸಿಸಿಐ ವತಿಯಿಂದಟಾಟಾಐಪಿಎಲ್ ಫ್ಯಾನ್ ಪಾರ್ಕ್‌ ವತಿಯಿಂದ ಈ ರೀತಿಉಚಿತವಾಗಿದೊಡ್ಡ ಪರದೆಯ ಮೇಲೆ ಕ್ರಿಕೆಟ್‌ಆಟವನ್ನು ವೀಕ್ಷಿಸಲು ಅವಕಾಶ ಕಲ್ಪಿಸಲಾಗಿದೆ. ಕಳೆದ ಬಾರಿ




4–5 ಸಾವಿರಜನಕ್ರಿಕೆಟ್ ಪ್ರೇಮಿಗಳು ಒಂದೆಡೆ ಸೇರಿ ಮ್ಯಾಚ್ ವೀಕ್ಷಿಸಿದ್ದರು. ಈ ಬಾರಿಅವರ ಸಂಖ್ಯೆ ದ್ವಿಗುಣವಾಗಲಿದೆ ಎಂಬ ನಂಬಿಕೆ ನಮ್ಮದು,ಮ್ಯಾಚ್ ವೀಕ್ಷಣೆಗೆ ಬೇಕಾದಎಲ್ಲಾ ವ್ಯವಸ್ಥೆಯನ್ನು ಬಿಸಿಸಿಐ ಮಾಡಿದೆ.ವೀಕ್ಷಣೆಗೆ ಬರುವಕ್ರಿಕೆಟ್ ಪ್ರೇಮಿಗಳ ವಾಹನ ನಿಲುಗಡೆ ಪ್ರತ್ಯೇಕ ವ್ಯವಸ್ಥೆ ಮಾಡಲಾಗಿದೆಎಂದುಅಲ್ವಿನ್‌ಗಾಯಕವಾಡ್ ತಿಳಿಸಿದರು.

ಈ ವೇಳೆ ಕೆ.ಎಸ್.ಸಿ.ಎ ಆಡಳಿತ ಮಂಡಳಿ ಸದಸ್ಯಸಿ.ಆರ್.ಹರೀಶ್ ಉಪಸ್ಥಿತರಿದ್ದರು.

ಸೂರ್ಯ ಪ್ರಗತಿ ಕನ್ನಡ ದಿನ ಪತ್ರಿಕೆ
ಜಾಹೀರಾತಿಗಾಗಿ ಸಂಪರ್ಕಿಸಿ: 9901010109

# ಸಾಂಸ್ಕೃತಿಕ ಹಬ್ಬ ಕಲೋತ್ಸವ – 2026"ಕ್ಕೆ ಕಾರ್ಯಕ್ರಮಕ್ಕೆ ಅದ್ದೂರಿ ಚಾಲನೆ

ತುಮಕೂರು: ಮನುಷ್ಯನು ಉತ್ತಮ ಜೀವನವನ್ನು ಕಟ್ಟಿಕೊಳ್ಳುವಲ್ಲಿ ಪ್ರಮುಖ ಪಾತ್ರವನ್ನು ವಹಿಸುತ್ತದೆ. ಜೊತೆಗೆ ಕಲೆಯಿಂದ ಮನುಷ್ಯನು ಸದಾ ಉತ್ಸಾಹಶಾಲಿಯಾಗಿರುತ್ತಾನೆ ಎಂದು ಶ್ರೀ ಸಿದ್ಧಾರ್ಥ ಶಿಕ್ಷಣ ಸಂಸ್ಥೆಯ ಆಡಳಿತಾಧಿಕಾರಿಗಳಾದ ನಂಜುಂಡಪ್ಪನವರು ತಿಳಿಸಿದರು.

ನಗರದ ಶ್ರೀ ಸಿದ್ಧಾರ್ಥ ತಾಂತ್ರಿಕ ಮಹಾವಿದ್ಯಾಲಯದ ಬಯಲು ರಂಗಸಜ್ಜಿಕೆಯಲ್ಲಿ ಆಯೋಜಿಸಲಾಗಿದ್ದ ಸಾಂಸ್ಕೃತಿಕ ಹಬ್ಬ "ಕಲೋತ್ಸವ 2026" ಕಾರ್ಯಕ್ರಮವನ್ನು ಸಸಿಗೆ ನೀರು ಎರೆಯುವುದರ ಮೂಲಕ ಕಾರ್ಯಕ್ರಮವನ್ನು ಉದ್ಘಾಟಿಸಿ ದ ಅವರು ಕಲೋತ್ಸವ ಕರ್ಯಕ್ರಮವು ವಿದ್ಯಾರ್ಥಿಗಳು ತಮ್ಮ ಕ್ರಿಯಾತ್ಮಕತೆ ಪ್ರತಿಭೆಗಳನ್ನು ಹೊರಹಾಕಲು ಸೃಷ್ಟಿಯಾಗಿರುವ ಒಂದು ಉತ್ತಮವಾದ ವೇದಿಕೆಯಾಗಿದೆ. ಮನುಷ್ಯನಲ್ಲಿ ಕಲೆ ಇದ್ದರೆ ಖುಷಿ, ಸಂತೋಷ , ಆಯುಷ್ಯ, ಆರೋಗ್ಯ ವೃದ್ಧಿಯಾಗುತ್ತದೆ ಎಂದರು.

ನಮ್ಮ ಭಾರತ ದೇಶ ಲಲಿತ ಕಲೆ, ಸಂಸ್ಕೃತಿ ಹಾಗೂ ಸಮಗ್ರತೆಯಿಂದ ಕೂಡಿರುವ ದೇಶವಾಗಿದ್ದು . ಮನುಷ್ಯನು ಹುಟ್ಟಿನಿಂದಲೇ ಕಲೆ ಮತ್ತು ಸಂಸ್ಕೃತಿಯನ್ನು ಬಳುವಳಿಯಾಗಿ ಪಡೆದುಕೊಂಡಿರುತ್ತಾನೆ. ಆದರೆ ಇತ್ತೀಚಿನ ದಿನಗಳಲ್ಲಿ ಗ್ರಾಮೀಣದ ಜನರು ಉದ್ಯೋಗಕ್ಕೆ ಮೊರೆ ಹೋಗಿ ಕಲೆ ಮತ್ತು ಸಂಸ್ಕೃತಿಯನ್ನು ಹಂತ ಹಂತವಾಗಿ ಮರೆತು ಹೋಗುತ್ತಿದ್ದಾರೆ. ಆದರೆ ಶೈಕ್ಷಣಿಕ ಕ್ಷೇತ್ರದಲ್ಲಿ ಮಾತ್ರ ವಿದ್ಯಾರ್ಥಿಗಳಿಂದ ಈ ಕಲೆ ಮತ್ತು ಸಂಸ್ಕೃತಿಯನ್ನು ಕಾಣಬಹುದಾಗಿದೆ




ಹಾಗಾಗಿ ವಿದ್ಯಾರ್ಥಿಗಳು ಮುಂದಿನ ದಿನಗಳಲ್ಲಿ ಕಲೆ ಸಂಸ್ಕೃತಿಗೆ ರಾಯಭಾರಿಗಳಾಗಿರಬೇಕೆಂದು ಹೇಳಿದರು.

ಸರಿಗಮಪ ಸಿಸನ್ 20ರ ಕಾರ್ಯಕ್ರಮದ ಸ್ಪರ್ಧಿ ಹಾಗೂ ಸಿದ್ಧಗಂಗಾ ಮೆಡಿಕಲ್ ಕಾಲೇಜಿನ ವೈದ್ಯರಾದ ಡಾ. ಶ್ರಾವ್ಯ ಮಾತನಡಿ ಪ್ರತಿಭೆ ಎನ್ನುವುದು ಮಾನವನಿಗೆ ದೇವರು ಕೊಟ್ಟಿರುವ ವರವಾಗಿದೆ. ಮಾನವನಲ್ಲಿ ವಿಭಿನ್ನ ರೀತಿಯ ಪ್ರತಿಭೆಗಳು ಅಡಗಿರುತ್ತವೆ, ಅವಕಾಶಗಳು ಸಿಕ್ಕಾಗ ಅಂತರಂಗದಲ್ಲಿರುವ ಪ್ರತಿಭೆಗಳನ್ನು ಸಕಾರಾತ್ಮಕವಾಗಿ ಬಳಸಿಕೊಂಡು ಹೊರ ಜಗತ್ತಿಗೆ ಪರಿಚಯಿಸುವುದರಿಂದ ಸಮಾಜದಲ್ಲಿ ಬದುಕನ್ನು ಕಟ್ಟಿಕೊಳ್ಳಲು ಒಳ್ಳೆಯ ಮಾರ್ಗವಾಗಿದೆ ಎಂದು ಹೇಳಿದರು.

ಎಸ್ ಎಸ್ ಐಟಿ ಕಾಲೇಜಿನ ವಿಶ್ರಾಂತ ಪ್ರಾಂಶುಪಾಲರಾದ ಡಾ. ವೀರಯ್ಯ ಮಾತನಾಡಿ ಧನಾತ್ಮಕ ವರ್ತನೆ, ಏಕಾಗ್ರತೆ, ಒಳ್ಳೆಯ ನಡತೆ, ಹಾರ್ಡ್ವರ್ಕ್ ಇವೆಲ್ಲವೂ ನಮ್ಮ ಜೊತೆ ಇದ್ದರೆ ಮಾತ್ರ ಗೆಲುವು ನಮ್ಮದಾಗುತ್ತದೆ ಎಂದು ವಿದ್ಯಾರ್ಥಿಗಳಿಗೆ ಕಿವಿಮಾತು ಹೇಳಿದರು.

ಎಸ್‌ಎಸ್‌ಐಟಿ ಕಾಲೇಜಿನ ಪ್ರಾಂಶುಪಾಲರಾದ ಹಾಗೂ ಡಾ. ಮಹಾಂತೇಶ್ ಎಂ ನಡಕಟ್ಟಿ ಮಾತನಾಡಿ ನಮ್ಮ ಸಂಸ್ಥೆಯ ವಿದ್ಯಾರ್ಥಿಗಳು ಸ್ಪರ್ಧೆಗಳನ್ನು ನಾವಿನ್ಯತೆ, ಸೃಜನಾತ್ಮಕತೆ, ಕ್ರಿಯಾತ್ಮಕತೆಯಿಂದ ಆಯೋಜಿಸಿ ಉತ್ಸಾಹದಿಂದ ಕಾರ್ಯಕ್ರಮದಲ್ಲಿ ತಮ್ಮನ್ನು ತಾವು ತೊಡಗಿಸಿಕೊಂಡಿದ್ದಾರೆ. ಈ ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು ಪ್ರತಿಯೊಂದು ಕ್ಷಣವನ್ನು ಆನಂದಿಸಿರಿ ಎಂದು ವಿದ್ಯಾರ್ಥಿಗಳಿಗೆ ತಿಳಿಸಿದರು.

ಈ ಸಂದರ್ಭದಲ್ಲಿ ಸಾಹೇ ವಿವಿಯಿಂದ ನೂತನವಾಗಿ ಪಿಎಚ್‌ಡಿ ಪಡೆದ ಪ್ರಾಧ್ಯಾಪಕರಿಗೆ ಗೌರವಿಸಲಾಯಿತು. ಕಲೋತ್ಸವ 2026 ಕಾರ್ಯಕ್ರಮದಲ್ಲಿ 30ಕ್ಕೂ ಹೆಚ್ಚು ಸ್ಪರ್ಧೆಗಳಿದ್ದು ವಿದ್ಯಾರ್ಥಿಗಳು ಈ ಸ್ಪರ್ಧೆಗಳಲ್ಲಿ ಉತ್ಸಾಹದಿಂದ ಪಾಲ್ಗೊಳ್ಳುತ್ತಿದ್ದಾರೆ.

ಕಾರ್ಯಕ್ರಮದಲ್ಲಿ ಅಕಾಡೆಮಿಯ ಡೀನ್ ಡಾ. ರೇಣುಕಾ ಲತಾ ಎಸ್, ಕಲೋತ್ಸವ 2026ರ ಅಧ್ಯಕ್ಷರಾದ ಡಾ.ಎನ್.ಪ್ರದೀಪ್, ಪ್ರಾಧ್ಯಾಪಕರುಗಳಾದ ಡಾ.ದಿವ್ಯಪ್ರಭಾ, ಡಾ. ರಾಜೇಶ್ ಕಾಮತ್ ಡಾ.ಯೋಗಾನಂದ್, ಹಾಗೂ ಎಲ್ಲಾ ವಿಭಾಗದ ಪ್ರಾಧ್ಯಾಪಕರು ಹಾಗೂ ಎಲ್ಲಾ ಸಿಬ್ಬಂದಿ ವರ್ಗದವರು, ವಿದ್ಯಾರ್ಥಿಗಳು ಹಾಜರಿದ್ದರು.

## ಅಪಾರ ಜನಾನುರಾಗಿ ಕ್ಯಾತ್ಸಂದ್ರ ಪೊಲೀಸ್‌ಠಾಣೆಯ ವೃತ್ತ ನಿರೀಕ್ಷಕ ರಾಘವೇಂದ್ರ ಅವರ ಹುಟ್ಟ ಹಬ್ಬ

ತುಮಕೂರಿನ ಕ್ಯಾತ್ಸಂದ್ರ ಪೊಲೀಸ್‌ಠಾಣೆಯ ವೃತ್ತ ನಿರೀಕ್ಷಕ ರಾಘವೇಂದ್ರ ಅವರ ಹುಟ್ಟ ಹಬ್ಬವನ್ನು ವಿವಿಧ ಸಂಘ ಸಂಸ್ಥೆಗಳ ಸಹಯೋಗದಲ್ಲಿ ನಗರದ ರೈಲ್ವೆ ನಿಲ್ದಾಣರಸ್ತೆಯಲ್ಲಿರುವ ಸಮೃದ್ಧಿ ಗ್ರಾಂಡ್ ಹೊಟೇಲ್‌ನಲ್ಲಿ ಆಯೋಜಿಸಲಾಗಿತ್ತು.




ಪೊಲೀಸ್ ಇನ್ಸ್‌ಪೆಕ್ಟರ್ ಆಗಿ, ವೃತ್ತ ನಿರೀಕ್ಷಕರಾಗಿ ಕೆಲಸ ಮಾಡುತ್ತಾ ಅಪಾರ ಜನಾನುರಾಗಿ ಗಳಾಗಿರುವ ರಾಘವೇಂದ್ರ ಅವರ ಹುಟ್ಟು ಹಬ್ಬವನ್ನು ನಾಗರಿಕರ ತಮ್ಮ ಹುಟ್ಟು ಹಬ್ಬವೆಂಬಂತೆ ಆಚರಿಸಿ, ಸಂಭ್ರಮಿಸಿದರು.ಅವರ ಸೇವೆಯ ವಿವಿಧ ಮಜಲುಗಳನ್ನು ಹಿರಿಯರು ಮೇಲುಕು ಹಾಕಿದರು.

ಜಾತ್ಯಾತೀತಯುವ ವೇದಿಕೆಯ ಜಿಲ್ಲಾಧ್ಯಕ್ಷ ವಿರೂಪಾಕ್ಷ ಡ್ಯಾಗೇರಹಳ್ಳಿ ಮಾತನಾಡಿ, ಸಿಪಿಐ ರಾಘವೇಂದ್ರ ಅವರು ಕಾನೂನು ಸುವ್ಯವಸ್ಥೆ ಕಾಪಾಡುವ ಅಧಿಕಾರಿಯಾಗಿ ಎಷ್ಟು ನಿಷ್ಠೂರವಾದಿಗಳೋ, ಹಾಗೆಯೇ ಸಹೃದಯವಂತ ಮನುಷ್ಯ. ಕಷ್ಟದಲ್ಲಿದ್ದವರಿಗೆ ತಮ್ಮ ಕೈಲಾದ ಸೇವೆಯನ್ನು ಮಾಡುತ್ತಾ, ಬಡವರು, ಬಲ್ಲಿದ್ದರೂ ಎಂಬ ಭೇಧಭಾವವಿಲ್ಲದೆ, ಕಾನೂನಿನ ಅಡಿಯಲ್ಲಿಯೇತಮ್ಮಕೈಲಾದ ಸಹಾಯ, ಸಹಕಾರವನ್ನು ನೀಡಿದವರು.ಹಿಂದುಳಿದ ವರ್ಗದಿಂದ ಬಂದು,ಇಷ್ಟೊಂದು ಜನ ಬೆಂಬಲ ಪಡೆದಿರುವ ಅಪರೂಪದ ಅಧಿಕಾರಿ, ಇಂತಹವರ ಸಂಖ್ಯೆ ಸಾವಿರವಾಗಬೇಕು ಎಂದು ಶುಭ ಹಾರೈಸಿದರು.

ಈ ವೇಳೆ ಉಪನ್ಯಾಸಕರಾದ ಡಾ.ಕೊಟ್ಟ ಶಂಕರ್, ಉಪ್ಪಾರಹಳ್ಳಿ ನಾಗರಿಕ ಹಿತರಕ್ಷತಾ ಸಮಿತಿಯ ಅಧ್ಯಕ್ಷರಾದ ಕೃಷ್ಣಮೂರ್ತಿ, ಡ್ಯಾಗೇರಹಳ್ಳಿ ವಿರೂಪಾಕ್ಷ, ಉಪ್ಪಾರಹಳ್ಳಿ ಕುಮಾರ್,ಲೋಕೇಶ್ ಸ್ವಾಮಿ,ಪಟೇಲ್ ಬಾಬಣ್ಣ, ಕರುನಾಡ ವಿಜಯ ಸೇನೆಯ ಸೋಮಶೇಖರ್, ಮೆಹಬೂಬ್ ಪಾಷ, ಜಿಯಾವುಲ್ಲಾ, ಸಿಪಿಐ ಅವಿನಾಶ್, ಎ.ಎಸ್.ಐ ಮುನಾವರ್ ಪಾಷ, ಕುಪ್ಪೂರು ಶ್ರೀಧರ, ಪ್ರಸನ್ನ ಕುಮಾರ್ ನಾದೂರು, ಕಿಶೋರ್ ನಾಯಕ್, ಚನ್ನಪ್ಪನ ಪಾಳ್ಯದ ಸುನಿ, ಸುರೇಶ್, ಕಿರಣ್, ಚಿಗ್ಗುಂಡ ಹಾಗೂ ದಸಂಸದ ಹರೀಶ್, ಗೊಲ್ಲಹಳ್ಳಿ ಮಂಜು, ಮೋಹನ್, ಅರುಣ್‌ಯಾದವ್ ಮತ್ತಿತರರು ಪಾಲ್ಗೊಂಡಿದ್ದರು.

## ವಿವಿಧ ಗ್ರಾಮಗಳಲ್ಲಿ ಭಕ್ತಿ ಭಾವದ ರಾಮನವಮಿ ಹಬ್ಬ ಆಚರಣೆ

ಮಧುಗಿರಿ : ಪಟ್ಟಣ ಸೇರಿದಂತೆ ತಾಲ್ಲೂಕಿನ ವಿವಿಧ ಗ್ರಾಮಗಳಲ್ಲಿ ರಾಮನವಮಿ ಹಬ್ಬವನ್ನು ಭಕ್ತಿ ಭಾವದಿಂದ ಆಚರಿಸಲಾಯಿತು.



ಮುಂಜಾನೆಯಿಂದಲೇ ಶ್ರೀ ರಾಮ ಹಾಗೂ ಆಂಜನೇಯ ದೇವಾಲಯಗಳಲ್ಲಿ ಅರ್ಚನೆ , ಅಭಿಷೇಕ , ಮಹಾಮಂಗಳಾರತಿ ವಿಶೇಷ ಪೂಜೆಗಳು ನೆರವೇರಿದವು. ಭಕ್ತರು ಸರದಿ ಸಾಲಿನಲ್ಲಿ ನಿಂತು ಸ್ವಾಮಿಯ ದರ್ಶನ ಪಡೆದು ಪುನೀತರಾದರು.

ಪಟ್ಟಣದ ಏಕಾಶಿಲಾ ಬೆಟ್ಟದ ತಪ್ಪಲಿನಲ್ಲಿರುವ ಕೋದಂಡ ರಾಮ ದೇವಾಲಯದಲ್ಲಿ ವಿಧಾನ ಪರಿಷತ್ ಸದಸ್ಯ ರಾಜೇಂದ್ರ ರಾಜಣ್ಣ ಪಾನಕ ಹಾಗೂ ಹೆಸರು ಬೇಳೆ ವಿತರಿಸಿದರು.

ಉಪವಿಭಾಗಾಧಿಕಾರಿ ಗೊಟೂರು ಶಿವಪ್ಪ, ಪುರಸಭೆ ಮಾಜಿ ಅಧ್ಯಕ್ಷರಾದ ಎಂ.ಕೆ.ನಂಜುಂಡಯ್ಯ, ಎನ್. ಗಂಗಣ್ಣ, ಲಾಲಾಪೇಟೆ ವ ಂ ಜ ು ನ ಾ ಥ ್ , ಎಂ.ವಿ.ಗೋವಿಂದರಾಜು, ಮಾಜಿ ಸದಸ್ಯರಾದ ಎಂ.ಜಿ.ಉಮೇಶ್, ಮಂಜುನಾಥ್ ಆಚಾರ್, ಎಂ.ವಿ.ಮಂಜುನಾಥ್, ಶ್ರೀಧರ್, ಟಪಾರಿ ಶ್ರೀನಿವಾಸ್, ಸಾಹಿತಿ ಮಲನ ಮೂರ್ತಿ, ಪ್ರೊ.ಡಿ.ಎಸ್.ಮುನೀಂದ್ರ ಕುಮಾರ್, ಕೃಷ್ಣಪ್ಪ , ವೆಂಕಟರಮಣಪ್ಪ, ಜಿ.ಜಯರಾಮಯ್ಯ, ಅನಂತನಾರಾಯಣಬಾಬು, ಎಸ್.ಬಿ.ಟಿ ಮಂಜುನಾಥ್, ಟಿ.ಪ್ರಸನ್ನ ಕುಮಾರ್, ಕುರುಬರಹಳ್ಳಿ ಹರ್ಷ, ಬಿ.ಎನ್.ನಾಗಾರ್ಜುನ ಇದ್ದರು.

## ಮತ್ತಿಹಳ್ಳಿ ಗ್ರಾಮಸ್ತರಿಗೆ ನಮ್ಮೂರು ನಮ್ಮ ಕೆರೆ ಹಸ್ತಾಂತರ

ತಿಪಟೂರು: ತಾಲ್ಲೂಕಿನ ಕಸಬಾ ಹೋಬಳಿಯ ಮತ್ತಿಹಳ್ಳಿ ಗ್ರಾಮದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ ವತಿಯಿಂದ ನಮ್ಮೂರು ನಮ್ಮ ಕೆರೆ ಅಡಿಯಲ್ಲಿ ಪುನಶ್ಚೇತನಗೊಂಡ ಕೆರೆ ಗ್ರಾಮಸ್ಥರಿಗೆ ಹಸ್ತಾಂತರ, ಸೂರಿಲ್ಲದ ನಿರ್ಗತಿಕರಾದ ಶಂಕರಮ್ಮನವರಿಗೆ ಶ್ರೀ ಕ್ಷೇತ್ರದ ವತಿಯಿಂದ ನಿರ್ಮಿಸಲಾದ ವಾತ್ಸಲ್ಯ ಮನೆ ಹಸ್ತಾಂತರ ಹಾಗೂ ಶಾಲಾ ವಿದ್ಯಾರ್ಥಿಗಳಿಗೆ ಬೆಂಚ್ ಡೆಸ್ಕಗಳ ವಿತರಣೆ ಕಾರ್ಯಕ್ರಮ ನಡೆಯಿತು.

ಮತ್ತಿಹಳ್ಳಿ ಕೆರೆ ಹಸ್ತಾಂತರ ಕಾರ್ಯಕ್ರಮದಲ್ಲಿ ತಾಲ್ಲೂಕು ಪಂಚಾಯಿತಿ ಮುಖ್ಯ ಕಾರ್ಯ ನಿರ್ವಾಹಣಾಧಿಕಾರಿ ಎಚ್.ಎಮ್.ಸುದರ್ಶನ್ ಮಾತಾನಾಡಿ ಧರ್ಮಸ್ಥಳ ಕ್ಷೇತ್ರದಿಂದ ನಾನಾ ಕಾರ್ಯಗಳು ನೆಡೆಯುತ್ತಿದ್ದು, ಕೆರೆಗಳಲ್ಲಿ ಮಣ್ಣು ತೆಗೆಯುವ ಮೂಲಕ ಪರಿಸರ ಸಂರಕ್ಷಣೆಗೆ ಹೆಚ್ಚಿನ ಅಧ್ಯತೆ ನೀಡಲಾಗಿದೆ. ಹಸ್ತಾಂತರಗೊಂಡ ಕೆರೆಯನ್ನು ಉಸ್ತುವಾರಿ ಸಮಿತಿಯು ನಿರ್ವಹಣೆ ಮಾಡಿದಾಗ ಮಾತ್ರ ಮಾಡಿದ ಕಾರ್ಯಕ್ಕೆ ಬೆಲೆಸಿಗುತ್ತದೆ ಎಂದರು.

ತಿಪಟೂರು ತಾಲ್ಲೂಕಿನ ಮತ್ತಿಹಳ್ಳಿ ಗ್ರಾಮದಲ್ಲಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆಯ ವತಿಯಿಂದ ವಿತರಣಾ ಕಾರ್ಯಕ್ರಮವನ್ನು ತಾಲ್ಲೂಕು ಮುಖ್ಯ ಕಾರ್ಯ ನಿರ್ವಹಣಾಧಿಕಾರಿ ಸುದರ್ಶನ್ ರವರ ಸಮ್ಮುಖದಲ್ಲಿ ಹಮ್ಮಿಕೊಳ್ಳಲಾಗಿತ್ತು. ಮೊದಲಿಗೆ ಯೋಜನೆಯ ವತಿಯಿಂದ ಮಾಶಾಸನ ಪಡೆ ಯುತ್ತಿರುವ ಸೂರಿಲ್ಲದ ಶಂಕರಮ್ಮರವರಿಗೆ ವಿಧಿವಿಧಾನಗಳ ಪ್ರಕಾರ ವಾತ್ಸಲ್ಯ ಮನೆಯನ್ನು ಹಸ್ತಾಂತರ ಮಾಡಿ ಶುಭಕೋರಲಾಯಿತು.

ತುಮಕೂರು ಜಿಲ್ಲಾ ನಿರ್ದೇಶಕ ಸತೀಶ್ ಸುವ ರ್ಣ ಗ್ರಾಮಾಭಿವೃದ್ಧಿ ಯೋಜನೆಯ ಸೇವೆ ತಿಪಟೂರು ತಾಲ್ಲೂಕಿನಲ್ಲಿ ಪ್ರಾರಂಭಗೊಂಡ 12 ವರ್ಷದಲ್ಲಿ ಕೃಷಿ, ಜ್ಞಾನವಿಕಾಸ, ಕೆರೆ ಪುನಶ್ವೇತನ, ರೈತಕ್ಷೇತ್ರ ಪಾಠಶಾಲೆ, ಅಧ್ಯಯನ ಪ್ರವಾಸ, ಮಾಶಾಸನ, ವಾತ್ಸಲ್ಯ ಮನೆ, ಶುದ್ಧ ಕುಡಿಯುವ ನೀರಿನ ಘಟಕಗಳ ಸ್ಥಾಪನೆ, ಸುಜ್ಞಾನನಿಧಿ ಶಿಷ್ಯವೇತನ, ಸಮುದಾಯ ಭವನಗಳ ನಿರ್ಮಾಣ, ಹಾಲಿನ ಡೈರಿ ನಿರ್ಮಾಣ, ಮಠ ಮಂದಿರ ಮಸೀದಿ ಚರ್ಚ್ ದೇವಸ್ಥಾನಗಳ ಜೀರ್ಣೋದ್ಧಾರ, ಜ್ಞಾನದೀಪ ಶಿಕ್ಷಕರ ನೇಮಕ, ಶಾಲಾ ಮಕ್ಕಳಿಗೆ ಬೆಂಚು ಡೆಸ್ಕ್ ವಿತರಣೆ, ಟ್ಯೂಷನ್ ಕ್ಲಾಸ್ ಶೌಚಾಲಯಗಳ ನಿರ್ಮಾಣ, ಹಿಂದೂ ರುದ್ರಭೂಮಿ ಪುನಶ್ಚತನ, ಸ್ವಾಸ್ಥ್ಯ, ಸಂಕಲ್ಪ ಕಾರ್ಯಕ್ರಮ, ಮದ್ಯವರ್ಜನ ಶಿಬಿರ ಇನ್ನು ಹತ್ತು ಹಲವಾರು ಸೇವೆಗಳಿಗೆ ಸರಿ ಸುಮಾರು 80 ಕೋಟಿ ರೂಪಾಯಿಗೂ ಅಧಿಕ ಹಣವನ್ನು ಬಡವರ ಏಳಿಗಿಗಾಗಿ ವಿನಿಯೊ ಗಿಸಿದೆ ಎಂದು ತಿಳಿಸಿದರು.

ಇಂದು ಶ್ರೀ ಕ್ಷೇತ್ರದ ವತಿಯಿಂದ ರಾಜ್ಯಾದ್ಯಂತ 1053ಕ್ಕೂ ಅಧಿಕ ಕೆರೆಗಳನ್ನು ಪುನಶ್ಚತನಗೊಳಿಸಿದ್ದು ಲಕ್ಷಾಂತರ ರೈತರ ಕೃಷಿಭೂಮಿಗೆ ಜೀವ ಜಲಾದಾರೆಯನ್ನು ಸಮರ್ಪಿಸಿದೆ ಎಂದು ಹರ್ಷ ವ್ಯಕ್ತಪಡಿಸಿದರು. ಇಷ್ಟಲ್ಲದೆ ತುಮಕೂರು ಜಿಲ್ಲೆಯ ಒಟ್ಟು 205 ಶಾಲೆಗಳಿಗೆ 1540 ಜೊತೆ ಬೆಂಚು ಡೆಸ್ಕ್ ಗಳನ್ನು ಶಾಲಾ ವಿದ್ಯಾರ್ಥಿಗಳಿಗೆ ವಿತರಿಸಲಾಗಿದೆ. ಇದರೊಟ್ಟಿಗೆ ತುಮಕೂರು ಜಿಲ್ಲೆಯಲ್ಲಿ ಇದುವರೆಗೂ 66 ಹಾಗೂ ತಿಪಟೂರು ತಾಲ್ಲೂಕಿನಲ್ಲಿ 15 ವಾತ್ಸಲ್ಯ ಮನೆ ನಿರ್ಮಿಸಲಾಗಿದೆ ಇಷ್ಟಲ್ಲದೇ ತುಮ ಕೂರು ಜಿಲ್ಲೆಯಲ್ಲಿ 102 ಕೆರೆಗಳನ್ನು ಹಾಗೂ ತಿಪಟೂರು ತಾಲ್ಲೂಕಿನಲ್ಲಿ 15 ಕೆರೆಗಳಿಗೆ ಪುನಶ್ವೇತನದ ಭಾಗ್ಯ ಶ್ರೀ ಕ್ಷೇತ್ರದ ವತಿಯಿಂದ ದೊರೆತಿದ್ದು ಈ ಎಲ್ಲಾ ಸೇವೆಗಳ ಜೊತೆಗೆ ಇನ್ನಷ್ಟು ಸೇವೆಗಳು ದೊರೆತು ತುಮಕೂರು ಜಿಲ್ಲೆ ಹಾಗೂ ತಿಪಟೂರು ತಾಲ್ಲೂಕಿನ ಬಡತನ ನಿರ್ಮೂಲನೆಗೊಂಡು ಸಂಪತ್ವರಿತವಾಗಿ ಮಾರ್ಪಾಡುಗೊಂಡಿದೆ

## ನ್ಯಾನೋ ಯೂರಿಯಾ ಕುರಿತು ರೈತರಿಗೆ ಮಾಹಿತಿ

ತುಮಕೂರು: ಕೃಷಿ ಇಲಾಖೆಯಿಂದ ನ್ಯಾನೋ ಯೂರಿಯಾ ಕುರಿತು ರೈತರಿಗೆ ಮಾಹಿತಿ ನೀಡಲಾಗಿದೆ.

ನ್ಯಾನೋ ಯೂರಿಯಾ (ದ್ರವ) ಮುಂದಿನ ಪೀಳಿಗೆಯ ಸುಧಾರಿತ ನ್ಯಾನೋ ಯೂರಿಯಾ ಆಗಿದ್ದು, ಹೆಚ್ಚಿನ ಸಾರಜನಕವನ್ನು ಅಂದರೆ 20% ಓ (ತಿ/ತ) ಸಾರಜನಕವನ್ನು ಹೊಂದಿದ್ದು, ಬೆಳೆಗಳ ಸಾರಜನಕ ಅಗತ್ಯವನ್ನು ಪೂರೈಸುತ್ತದೆ.

ನ್ಯಾನೋ ಗೊಬ್ಬರಗಳ ನಿಖರ ಮತ್ತು ಉದ್ದೇಶಿತ ಬಳಕೆ ಪರಿಸರಕ್ಕೆ ಹಾನಿಯಾಗದಂತೆ ಬೆಳೆಗಳ ಸಾರಜನಕದ ಅಗತ್ಯವನ್ನು ಪೂರೈಸುತ್ತದೆ. ನ್ಯಾನೋ ಗೊಬ್ಬರಗಳನ್ನು ಎಲೆಗಳ ಮೇಲೆ ಸಿಂಪಡಿಸುವುದರಿಂದ ಪೋಷಕಾಂಶಗಳ ಸದ್ಬಳಕೆಯಾಗುತ್ತದೆ. ಪೋಷಕಾಂಶಗಳ ವ್ಯರ್ಥವಾಗುವಿಕೆ ಕಡಿಮೆಯಾಗುತ್ತದೆ ಹಾಗೂ ಸಾಮಾನ್ಯ ರಸಗೊಬ್ಬರ ಬಳಕೆಯಿಂದ ಮಣ್ಣು ಮತ್ತು ನೀರಿನ ಮೇಲೆ ಉಂಟಾಗುವ ದುಷ್ಪರಿಣಾಮಗಳನ್ನು ಕಡಿಮೆ ಮಾಡಬಹುದು.

ಬೆಳೆ ಬೆಳವಣಿಗೆಯ ಹಂತಗಳಲ್ಲಿ ಇವುಗಳನ್ನು ಸಿಂಪಡಿಸುವುದರಿಂದ ಮೇಲುಗೊಬ್ಬರವಾಗಿ ಬಳಸುವ ಯೂರಿಯಾ ಚೀಲವನ್ನು 50% ವರೆಗೆ ಕಡಿಮೆ ಮಾಡಬಹುದು. ಉತ್ತಮ ಹರಡುವಿಕೆ ಸಾಮರ್ಥ್ಯ ಮತ್ತು ಸಮೀಕರಣವು ಹೆಚ್ಚು ಕ್ಲೋರೊಫಿಲ್, ದ್ಯುತಿಸಂಶ್ಲೇಷಕ ದಕ್ಷತೆ, ವರ್ಧಿತ ಗುಣಮಟ್ಟ ಮತ್ತು ಉತ್ತಮ ಬೆಳೆ ಇಳುವರಿಗೆ ಕಾರಣವಾಗುತ್ತದೆ. ರೈತರು ಸುಲಭವಾಗಿ ಸಾಗಾಣಿಕೆ ಮಾಡಬಹುದು, ಕಡಿಮೆ ಜಾಗದಲ್ಲಿ ಸಂಗ್ರಹಿಸಬಹುದು ಮತ್ತು ಸುಲಭವಾಗಿ ಬೆಳೆಯ ಯಾವುದೇ ಹಂತದಲ್ಲಿ ಬಳಸಬಹುದು ಎಂದು ಜಂಟಿ ಕೃಷಿ

# ಏ.1ರಂದು ಸಿದ್ದಗಂಗಾ ಮಠಕ್ಕೆ ರಾಷ್ಟ್ರಪತಿ ಭೇಟಿ; ಎಲ್ಲೆಡೆ ಬಿಗಿ ಬಂದೋಬಸ್ತ್

## ಸಾರ್ವಜನಿಕ ಸಂಚಾರಕ್ಕೆ ಪರ್ಯಾಯ ಮಾರ್ಗ, 15,000 ಪೊಲೀಸ್ ಸಿಬ್ಬಂದಿ ನಿಯೋಜನೆ

ತುಮಕೂರು: ಏಪ್ರಿಲ್ 1ರಂದು ಸಿದ್ದಗಂಗಾ ಮಠದ ಲಿಂಗೈಕ್ಯ ಶ್ರೀ ಶಿವಕುಮಾರ ಸ್ವಾಮೀಜಿ ಅವರ ಜಯಂತಿ ಕಾರ್ಯಕ್ರಮದಲ್ಲಿ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಭಾಗವಹಿಸಲಿದ್ದು, ಸಂಬಂಧಿಸಿದಂತೆ ತುಮಕೂರು ನಗರದಾದ್ಯಂತ ಅಂದು ಪೊಲೀಸ್ ಬಂದೋಬಸ್ತ್ ವ್ಯವಸ್ಥೆ ಇರಲಿದೆ.

ಜಿಲ್ಲಾಧಿಕಾರಿ ಕಚೇರಿಯಲ್ಲಿ ಶುಕ್ರವಾರ ನಡೆದ ಅತಿಗಣ್ಯರ ಭದ್ರತೆಯ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾಧಿಕಾರಿ ಶುಭ ಕಲ್ಯಾಣ್, ಈಗಾಗಲೇ ತುಮಕೂರು ಜಿಲ್ಲೆಗೆ ಉಪರಾಷ್ಟ್ರಪತಿ, ಕೇಂದ್ರ ಗೃಹ ಸಚಿವರು, ರಾಜ್ಯಪಾಲರು ಸೇರಿದಂತೆ ಗಣ್ಯರು ಆಗಮಿಸಿದ ಹಿನ್ನೆಲೆಯಲ್ಲಿ ಜಿಲ್ಲೆಯಲ್ಲಿ ಸೂಕ್ತ ಭದ್ರತೆಯನ್ನು ಒದಗಿಸಿ ಯಶಸ್ವಿಯಾಗಿ ಕಾರ್ಯಕ್ರಮಗಳನ್ನು ಜರುಗಿಸಲಾಗಿದೆ. ಪ್ರಸ್ತುತ ರಾಷ್ಟ್ರಪತಿಯವರ





ಕಾರ್ಯಕ್ರಮ ಅತಿಗಣ್ಯರ ಭದ್ರತೆ ಹೊಂದಿರುವುದರಿಂದ ಯಾವುದೇ ಲೋಪವಿಲ್ಲದಂತೆ ಭದ್ರತೆ ಒದಗಿಸುವ ಸಲುವಾಗಿ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಜವಾಬ್ದಾರಿ ನೀಡಿ ನಿಯೋಜನೆ ಮಾಡಲಾಗಿದೆ ಎಂದು ಸಭೆಗೆ ಮಾಹಿತಿ ನೀಡಿದರು.

ಭದ್ರತೆ ಕುರಿತು ಮಾಹಿತಿ ನೀಡಿದ ಜಿಲ್ಲಾ ಪೊಲೀಸ್ ಅಧೀಕ್ಷಕ ಕೆ.ವಿ. ಅಶೋಕ್ ಅವರು, ದೇಶದ ಪ್ರಥಮ ಪ್ರಜೆ ರಾಷ್ಟ್ರಪತಿ ಅವರ ಆಗಮನದ ಹಿನ್ನೆಲೆಯಲ್ಲಿ ನಗರದಾದ್ಯಂತ ಪೊಲೀಸ್ ಬಂದೋಬಸ್ತ್ ಏರ್ಪಡಿಸಲು ವ್ಯವಸ್ಥೆ ಮಾಡಲಾಗಿದೆ ಎಂದರು.

ರಾಷ್ಟ್ರಪತಿ ಅವರ ಭದ್ರತೆಗೆ ಸುಮಾರು 15,000 ಪೊಲೀಸ್ ಸಿಬ್ಬಂದಿ ನಿಯೋಜಿಸಲು ಪೊಲೀಸ್ ಇಲಾಖೆ ಸಿದ್ಧತೆ ಮಾಡಿಕೊಂಡಿರುವ ಬಗ್ಗೆ ಮಾಹಿತಿ ನೀಡಿದ ಅವರು, ರಾಷ್ಟ್ರಪತಿ ಆಗಮಿಸಿ ಕಾರ್ಯಕ್ರಮದಲ್ಲಿ ಭಾಗವಹಿಸಿ, ಮತ್ತೆ ನಿರ್ಗಮಿಸುವವರೆಗೆ ತುಮಕೂರು ನಗರದಾದ್ಯಂತ ಪೊಲೀಸ್ ಬಂದೋಬಸ್ತ್ ಮಾಡಲಾಗಿರುತ್ತದೆ. ತುಮಕೂರು ವಿಶ್ವವಿದ್ಯಾನಿಲಯದಲ್ಲಿ ಹೆಲಿಪ್ಯಾಡ್, ವಾಹನ ಸಂಚರಿಸುವ ರಸ್ತೆ ಮಾರ್ಗಗಳು ಹಾಗೂ ಕಾರ್ಯಕ್ರಮ ನಡೆಯುವ ಜಾಗ ಸೇರಿದಂತೆ ಎಲ್ಲಾ ಪ್ರದೇಶಗಳಲ್ಲಿ ಪ್ರತ್ಯೇಕವಾದ ತಂಡಗಳನ್ನು ರಚಿಸಿ ಪೊಲೀಸ್ ಬಂದೋಬಸ್ತ್ ಮಾಡಲಾಗುತ್ತಿದೆ. ಅಲ್ಲದೆ, ಮಾರ್ಚ್ 31ರಂದೇ ತಾಲೀಮು ಪ್ರಕ್ರಿಯೆ ಹಾಗೂ ಪೊಲೀಸ್ ಸಿಬ್ಬಂದಿಗೆ ಮಾಹಿತಿ ಹಾಗೂ ಇನ್ನಿತರ ಚಟುವಟಿಕೆಗಳನ್ನು ಪೊಲೀಸ್ ಇಲಾಖೆ ಹಮ್ಮಿಕೊಂಡಿರುವುದಾಗಿ ಸಭೆಗೆ ಮಾಹಿತಿ ನೀಡಿದರು.

ನಗರದಾದ್ಯಂತ ಎಲ್ಲಾ ರಸ್ತೆಗಳನ್ನು ಪೊಲೀಸ್ ಬಂದೋಬಸ್ತ್‌ನಲ್ಲಿ ಇರಿಸಿರುವ ಹಿನ್ನೆಲೆಯಲ್ಲಿ ನಗರದಲ್ಲಿ ಸಂಚರಿಸುವ ಸಾರ್ವಜನಿಕರಿಗೆ ಪರ್ಯಾಯ ಮಾರ್ಗವನ್ನು ಸೂಚಿಸಲಾಗುವುದು. ಅಲ್ಲದೆ, ಕಾರ್ಯಕ್ರಮ ನಡೆಯುವ ಜಾಗಕ್ಕೆ ಸಾರ್ವಜನಿಕರು, ಭಕ್ತರು ತೆರಳಲು ಪ್ರತ್ಯೇಕ ಪ್ರವೇಶ ದ್ವಾರಗಳನ್ನು ನಿಗದಿಗೊಳಿಸಲಾಗುವುದು ಎಂದು ಅವರು ತಿಳಿಸಿದರು.

ಸಭೆಯಲ್ಲಿ ಭಾಗವಹಿಸಿದ್ದ ಕೇಂದ್ರ ಗುಪ್ತಚರ ಇಲಾಖೆಯ ಸುಹಾಸ್ ಸೂಡ ಅವರು, ರಾಷ್ಟ್ರಪತಿ ಕಾರ್ಯಕ್ರಮಕ್ಕೆ ಅತಿಗಣ್ಯರ ಭದ್ರತೆ ಇರುವುದರಿಂದ ಜಿಲ್ಲಾಡಳಿತದಿಂದ ಎಲ್ಲಾ ರೀತಿಯ ಸೂಕ್ತ ಕ್ರಮಗಳನ್ನು ಅನುಸರಿಸಬೇಕಾಗುತ್ತದೆ. ಈ ಹಿನ್ನೆಲೆಯಲ್ಲಿ ಈಗಾಗಲೇ ಜಿಲ್ಲಾಡಳಿತದಿಂದ ಅಧಿಕಾರಿಗಳನ್ನು ನಿಯೋಜಿಸಿ ಜವಾಬ್ದಾರಿ ವಹಿಸಿರುವುದು ಸ್ವಾಗತಾರ್ಹ. ಅಂತೆಯೇ, ಕಾರ್ಯಕ್ರಮದಲ್ಲಿ ಯಾವುದೇ ಲೋಪವಾಗದಂತೆ ನಿರ್ವಹಿಸಬೇಕಿದೆ ಎಂದರು.

ರಾಜ್ಯ ಗುಪ್ತಚರ ಇಲಾಖೆಯ ಪೊಲೀಸ್ ಅಧೀಕ್ಷಕ ಸುರೇಶ್, ಅಪರ ಜಿಲ್ಲಾಧಿಕಾರಿ ಡಾ: ಎನ್. ತಿಪ್ಪೇಸ್ವಾಮಿ, ಸಿದ್ಧಗಂಗಾ ಮಠದ ಪ್ರತಿನಿಧಿ ಮಲ್ಲಿಕಾರ್ಜುನ್ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಸಭೆಯಲ್ಲಿ ಭಾಗವಹಿಸಿದ್ದರು.



ಸಭೆಯ ನಂತರ ತುಮಕೂರು ವಿಶ್ವವಿದ್ಯಾನಿಲಯದ ಹೆಲಿಪ್ಯಾಡ್ ಹಾಗೂ ಸಿದ್ದಗಂಗಾ ಮಠದ ಕಾರ್ಯಕ್ರಮ ನಡೆಯುವ ವೇದಿಕೆ ಇತ್ಯಾದಿ ಪ್ರದೇಶಗಳಿಗೆ ನಿಯೋಗ ಭೇಟಿ ನೀಡಿ ಪರಿಶೀಲಿಸಿತು.

# ನಾಯಕತ್ವದ ಗುಣವನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು – ಡಾ. ಜಿ ಪರಮೇಶ್ವರ್




ವಿದ್ಯಾರ್ಥಿಯ ಜೀವನದಲ್ಲಿ ನಾಯಕತ್ವದ ಗುಣಗಳನ್ನು ಬೆಳೆಸಿಕೊಳ್ಳಬೇಕು ಭಾರತದ ಪ್ರಜಾಪ್ರಭುತ್ವದ ಆಶಯಗಳನ್ನು ಈಡೇರಿಸುವ ಮತ್ತು ಅವುಗಳನ್ನು ಆಚರಣೆಗೆ ತರುವ ವಿದ್ಯಾರ್ಥಿಗಳದಾಗಿರಬೇಕು. ಜೊತೆಗೆ ಶಾಲಾ– ಕಾಲೇಜು ಹಂತಗಳಲ್ಲಿ ಅಣುಕು ಸಂಸತ್ತುಗಳನ್ನು ವಿದ್ಯಾರ್ಥಿಗಳು ಮಾಡಬೇಕು ಮತ್ತು ಉತ್ತಮ ಬರವಣಿಗೆ, ಮಾತುಗಾರಿಕೆಯ ಕೌಶಲ್ಯಗಳನ್ನು ವಿದ್ಯಾರ್ಥಿಗಳು ಬೆಳೆಸಿಕೊಳ್ಳಬೇಕು ಎಂದು ಗೃಹ ಸಚಿವರಾದ ಶ್ರೀ ಸಿದ್ಧಾರ್ಥ ಶಿಕ್ಷಣ ಸಂಸ್ಥೆಯ ಕಾರ್ಯದರ್ಶಿಗಳು ಆದ ಡಾ. ಜಿ ಪರಮೇಶ್ವರ್ ಅವರು ಹೇಳಿದರು ತುಮಕೂರು ನಗರದ ಶ್ರೀ ಸಿದ್ಧಾರ್ಥ ಪ್ರಥಮ ದರ್ಜೆ ಕಾಲೇಜಿನ ರಾಜ್ಯಶಾಸ್ತ್ರ ವಿಭಾಗದ ವತಿಯಿಂದ ಪ್ರಜಾಪ್ರಭುತ್ವದ ದೇವಾಲಯವಾದ ವಿಧಾನಸೌಧವನ್ನು ವಿದ್ಯಾರ್ಥಿಗಳು ಶೈಕ್ಷಣಿಕ ಪ್ರವಾಸದಲ್ಲಿ ಗುರುವಾರದಂದು ಪ್ರಸಕ್ತ ಜರುಗುತ್ತಿರುವ ಬಜೆಟ್ ಭೇಟಿ ಮಾಡಿ ಅಲ್ಲಿ ನಡೆಯುತ್ತಿದ್ದ ಅಧಿವೇಶವನ್ನು ನೇರವಾಗಿ ವೀಕ್ಷಿಸಿದರು.

ಸಂವಿಧಾನದ ಆಶಯಗಳನ್ನು ಈಡೇರಿಸಲು ಪ್ರಜಾಪ್ರಭುತ್ವ ವ್ಯವಸ್ಥೆಯ ಶಾಸಕಾಂಗ ಕಾರ್ಯಾಂಗ ನ್ಯಾಯಾಂಗ ಸೂಕ್ತವಾಗಿ ಕಾರ್ಯನಿರ್ವಹಿಸಬೇಕು ಹಾಗಾಗಿ ವಿದ್ಯಾರ್ಥಿಗಳು ರಾಜ್ಯಶಾಸ್ತ್ರ ವಿಭಾಗದಲ್ಲಿ ಸಂವಿಧಾನವನ್ನು ಆಳವಾಗಿ ಅಧ್ಯಯನ ಮಾಡಬೇಕು ಎಂದರು. ಅದಿವೇಶನವನ್ನು ವೀಕ್ಷಿಸಿದ ವಿದ್ಯಾರ್ಥಿಗಳ ಸಂವಾದವನ್ನು ಮಾಡಿದರು ಈ ಸಂದರ್ಭದಲ್ಲಿ ಗೃಹ ಇಲಾಖೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಲತಾ ಮೇಡಂ ಅವರು ವಿದ್ಯಾರ್ಥಿಗಳ



ಕುಶಲೋಪರಿಯನ್ನು ವಿಚಾರಿಸಿ ವಿದ್ಯಾರ್ಥಿಯ ಜೀವನದಲ್ಲೇ ಸಾಧನೆಗಳನ್ನು ಮಾಡಬೇಕು ವಿದ್ಯಾರ್ಥಿಗಳಿಗೆ ಸಲಹೆ ನೀಡಿದರು.

ರಾಜ್ಯಶಾಸ್ತ್ರ ವಿಭಾಗದ ಮುಖ್ಯಸ್ಥರಾದ ಡಾ. ರಂಗಸ್ವಾಮಿ ಎಂ ಆರ್, ಸಹಾಯಕ ಪ್ರಾಧ್ಯಾಪಕರುಗಳಾದ ಹನುಮಂತರಾಯ ಎಚ್ ,ಆಶಾ, ಸುಪ್ರಿಯ, ಮಹಾದೇವಂಜಿ, ಮಣಿ ಎಚ್ ಜಿ, ಶಿಲ್ಪಶ್ರೀ, ಶಿಲ್ಪಕಲಾ ಸೇರಿದಂತೆ ಕಾಲೇಜು ವತಿಯಿಂದ 40 ಜನ ವಿದ್ಯಾರ್ಥಿಗಳು ರಾಜ್ಯ ವಿಧಾನ ಮಂಡಲವನ್ನು ವೀಕ್ಷಣೆ ಮಾಡಿದರು

## ವಿಶ್ವ ಮಹಿಳಾ ದಿನಾಚರಣೆ – 2026 ಜಿಲ್ಲಾ ಮಹಿಳಾ ಪ್ರಶಸ್ತಿ ಪ್ರಧಾನ ಸಮಾರಂಭ

ಶೈನ್ ಅಧ್ಯಯನ ಸಂಸ್ಥೆ (ರಿ.) ತುಮಕೂರು, ತುಮಕೂರು ಜಿಲ್ಲಾ ಮಹಿಳಾ ಸಂಘಟನೆ (ರಿ.), ವಿಶ್ವ ಮಹಿಳಾ ದಿನಾಚರಣೆ – 2026 ಹಾಗೂ ಜಿಲ್ಲಾ ಮಹಿಳಾ ಪ್ರಶಸ್ತಿ ಪ್ರಧಾನ ಸಮಾರಂಭವನ್ನು ದಿನಾಂಕ 28–3–2025 ನೇ ಶನಿವಾರ ಬೆಳಗ್ಗೆ 10–30 ಕ್ಕೆ ಡಾ. ಬಿ.ಸಿ. ಶೈಲಾನಾಗರಾಜ್ ಸಾಹಿತ್ಯ ಭವನ ಪ್ರಗತಿ ಬಡಾವಣೆ ಮರಳೂರು, ತುಮಕೂರು ಇಲ್ಲಿ ಆಯೋಜಿಸಲಾಗಿದೆ.

ಗೌರವಾನ್ವಿತ ಸಿವಿಲ್ ನ್ಯಾಯಾಧೀಶರು ಮತ್ತು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿಗಳಾದ ನೂರುನ್ನಿಸಾ ಉದ್ಘಾಟಿಸಲಿದ್ದಾರೆ, ಲೇಖಕಿ, ಮಹಿಳಾ ಚಿಂತಕಿ, ತುಮಕೂರು ಜಿಲ್ಲಾ ಮಹಿಳಾ ಸಂಘಟನೆ (ರಿ.), ಸಂಸ್ಥಾಪಕ ಅಧ್ಯಕ್ಷರಾದ ಡಾ. ಬಿ.ಸಿ. ಶೈಲಾನಾಗರಾಜ್ ಅಧ್ಯಕ್ಷತೆ ವಹಿಸಲಿದ್ದಾರೆ, ಮಹಿಳಾ ಸಂಘಟಕರು ಎಲ್.ಐಸಿ. ಏಜೆಂಟರು ಹಾಗೂ ಸಮಾಜ ಸೇವಕರು, ಶ್ರೀಮತಿ ಎನ್. ಲಕ್ಷ್ಮೀದೇವಮ್ಮನವರು ಜಿಲ್ಲಾ ಮಹಿಳಾ ಪ್ರಶಸ್ತಿ ಸ್ವೀಕರಿಸಲಿದ್ದಾರೆ. ಸಮಾಜ ಸೇವಕರಾದ ಶ್ರೀಮತಿ ಎಂ.ಪಿ. ಸುಶೀಲಮ್ಮ, ಜಿಲ್ಲಾ ಮಹಿಳಾ ಸಂರಕ್ಷಣಾ ವೇದಿಕೆ ಅಧ್ಯಕ್ಷರಾದ ಶ್ರೀಮತಿ ತಾಹೆರಾ ಕುಲ್ಸುಂ, ಮುಂಜಾನೆ ಸ್ನೇಹಬಳಗದ ಅಧ್ಯಕ್ಷರಾದ ಲಕ್ಷ್ಮೀನರಸಿಂಹಶೆಟ್ಟರು, ಭಾರತೀಯ ಜೀವವಿಮಾ ನಿಗಮದ ಅಭಿವೃದ್ಧಿ ಅಧಿಕಾರಿ ಗಿರಿರಾಜ್ ಎಸ್.ಕೆ., ನ್ಯಾಯಾಂಗ ಇಲಾಖೆ ನಿವೃತ್ತ ಶಿರಸ್ತೇದಾರ್, ಹೆಚ್. ಶಂಕರಪ್ಪ ಮುಖ್ಯ ಅತಿಥಿಗಳಾಗಿ ಭಾಗವಹಿಸಲಿದ್ದಾರೆ. ಜಿಲ್ಲಾ ಮಹಿಳಾ ಸಂಘಟನೆಯ ಖಜಾಂಚಿಗಳಾದ ಶ್ರೀಮತಿ ಪಿ.ಜಿ. ಶಕುಂತಲ ಆಶಯ ನುಡಿಗಳನ್ನಾಡಲಿದ್ದಾರೆ.

ಗಾಯಕಿಯರಾದ ಮಾಧುರ್ಯ ವೀಣಾ ಇಡಕನಹಳ್ಳಿ, ಮುತ್ಯಾಲಮ್ಮ, ಶಾಂತಕುಮಾರಿ, ಸಾವಿತ್ರಮ್ಮ, ಚಂದ್ರಕಲಾ, ಜಯಮ್ಮ ಪ್ರಮೀಳಾ, ವೀಣಾ ಉಪ್ಪಾರಹಳ್ಳಿ, ನಾಗರತ್ನ, ಉಷಾರಾಣಿ ನೀಲಾಂಬಿಕ ಮಹಿಳಾ ಜಾಗೃತಿ ಗೀತೆಗಳನ್ನು ಪ್ರಸ್ತುತಪಡಿಸಲಿದ್ದಾರೆ. ಸಂಚಾಲಕಿ ಜಿಲ್ಲಾ ಮಹಿಳಾ ಸಂಘಟನೆ ನಿರ್ಮಲ ಗೂಳಹರವೆ ನಿರೂಪಿಸಲಿದ್ದಾರೆ. ಮಹಿಳಾ ಜಾಗೃತಿ ಮೆರವಣಿಗೆ ಬೆಳಗ್ಗೆ 8.30 ಕ್ಕೆ ಶಾಲಾ ವಿದ್ಯಾರ್ಥಿನಿಯರು, ಸ್ತ್ರೀಶಕ್ತಿ ಸಂಘಟನೆಯ ಸದಸ್ಯರು ಭಾಗವಹಿಸುತ್ತಾರೆ.

# ರಂಗಭೂಮಿ ಎಂಬುದು ಗಂಧರ್ವ ಕಲೆ



ರಂಗಭೂಮಿ ಎಂಬುದು ಗಂಧರ್ವ ಕಲೆಯಾಗಿದೆ ಎಂದು ಸಮಾಜ ಸೇವಕ ಎಸ್.ಟಿ. ಶ್ರೀನಿವಾಸ್ ಅಭಿಪ್ರಾಯಪಟ್ಟರು. ಅವರು ಕರ್ನಾಟಕ ನಾಟಕ ಅಕಾಡೆಮಿ, ಝೆನ್ ಟೀಮ್ ಹಾಗೂ ಡಿ.ವಿ. ಗುಂಡಪ್ಪ ಕನ್ನಡ ಅಧ್ಯಯನ ಸಂಶೋಧನಾ ಸಂಸ್ಥೆ ವತಿಯಿಂದ ವಿಶ್ವರಂಗಭೂಮಿ ದಿನಾಚರಣೆ ಅಂಗವಾಗಿ ತುಮಕೂರು ವಿವಿ ಮುಂಭಾಗ ಆಯೋಜಿಸಿದ್ದ ಬೀದಿ ನಾಟಕಕ್ಕೆ ಚಾಲನೆ ನೀಡಿ ಮಾತನಾಡಿದರು.

ಪ್ರೇಕ್ಷಕರು ಇರುವ ಕಡೆ ನಾಟಕವನ್ನು ಒಯ್ದು ಆಡಿಸುವುದೇ ಬೀದಿ ನಾಟಕ ಎಂದ ಅವರು ರಂಗಮಂದಿರವನ್ನಾಗಲಿ, ಬೆಳಕಿನ ವಿನ್ಯಾಸದ ಚಾತುರ್ಯ, ವೇಷಭೂಷಣ ಯಾವುದೇ ರಂಗಭೂಮಿಯ ನೆರವು ಇಲ್ಲದೆ ಆಯೋಜನೆಯಾಗುವ ಪ್ರಕಾರ ಬೀದಿ ನಾಟಕ ಎಂದರು.

ನಾಲ್ಕು ರಸ್ತೆಗಳು ಸೇರುವ ಯಾವುದೇ ಸ್ಥಳ, ಬೀದಿ ನಾಟಕಕ್ಕೆ ರಂಗಸ್ಥಳವಾಗುತ್ತದೆ. ಇದ್ದಕ್ಕಿದ್ದಂತೆ ನಾಟಕವನ್ನು ಆಡಿಸುವುದರಿಂದ ಇರುವ ಬೀದಿ ದೀಪಗಳನ್ನೇ ಬಳಸಬಹುದಾಗಿದೆ ಎಂದರು. ಬೀದಿಯ ನಡುವೆ ತಾವೇ ತಯಾರಿಸಿದ ಚೌಕಟ್ಟಿನಲ್ಲಿ ನಟರು ಕುಳಿತುಕೊಳ್ಳುವರು. ತಮ್ಮ ಸರದಿ ಬಂದಾಗ ಎದ್ದು ನಟಿಸುವರು. ನಾಲ್ಕು ಕಡೆ ಬೀದಿಯ ಹಾದಿ ಹೋಕರೆ ಪ್ರೇಕ್ಷಕರಾಗಿ ನಿಂತಿರುತ್ತಾರೆ. ಹಾಡುಗಳು, ಭಾಷಣ, ಮೊದಲಾದವನ್ನು ಅನೇಕ ತಂತ್ರಗಳ ಸಹಾಯದಿಂದ ಪ್ರತಿಪಾದಿಸಲಾಗುತ್ತದೆ. ಸಮಾಜದಲ್ಲಿನ ಜನ ಜೀವನಕ್ಕೆ ಜೀವಂತವಾಗಿ ಪ್ರತಿಸ್ಪಂದಿಸುವುದೇ ಬೀದಿ ನಾಟಕದ ಮುಖ್ಯ ಗುರಿ ಎಂದರು.

ಹಲವಾರು ಸಾಮಾಜಿಕ ಪಿಡುಗುಗಳ ಬಗ್ಗೆ ಜನರಲ್ಲಿ ಜಾಗೃತಿ ಮೂಡಿಸುವ ಸಲುವಾಗಿ ಹಲವಾರು ಕಥಾ ಹಂದರಗಳನ್ನು ಇಟ್ಟುಕೊಂಡು ಬೀದಿ ನಾಟಕವನ್ನು ಆಯೋಜಿಸುತ್ತಾ ಬರಲಾಗಿದೆ ಎಂದರು.

ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಚಿಕ್ಕಪ್ಪಯ್ಯ ಮಾತನಾಡಿ ಬೀದಿ ನಾಟಕವೆಂಬುದು ಸತ್ವಯುತ ಅಸ್ತ್ರವಿದ್ದಂತೆ. ಸಮಾಜವನ್ನು ತಿದ್ದುವ, ಪ್ರಭುತ್ವವನ್ನು ಪ್ರಶ್ನಿಸುವ ಮೂಲಕ ಬೀದಿ ನಾಟಕಗಳು ಚಾಟಿ ಬೀಸುವ ಕೆಲಸ ಮಾಡುತ್ತಾ ಬಂದಿದೆ ಎಂದರು.

ಮತ್ತೊಬ್ಬ ಕರ್ನಾಟಕ ನಾಟಕ ಅಕಾಡೆಮಿ ಪ್ರಶಸ್ತಿ ಪುರಸ್ಕೃತರಾದ ಚಿಕ್ಕ ಹನುಮಂತಯ್ಯ ಮಾತನಾಡಿ ಅನ್ಯಾಯ, ಶೋಷಣೆ, ಸಮಾಜದ ಅನಿಷ್ಟ ಪದ್ಧತಿ, ಪರಂಪರೆಗಳನ್ನು ವಿಮರ್ಶೆ, ವಿಶ್ಲೇಷಣೆಗೆ ಒಳಪಡಿಸುವ, ಜನರನ್ನು ಆ ವಿಷಯಗಳ ಬಗ್ಗೆ ಚಿಂತಿಸುವಂತೆ ಬೀದಿ ನಾಟಕ ಮಾಡುತ್ತದೆ ಎಂದರು.ಶಾರದಾಂಬ ಟ್ರಸ್ಟ್ ನ ಅಧ್ಯಕ್ಷೆ ಯಶೋದಾ ದೇವಸ್ಮಿತ ಮಾತನಾಡಿ ರಂಗಭೂಮಿ ಮೂಲಕ ಮನುಷ್ಯ ಸಂಬಂಧಗಳನ್ನು ಕಾಣಬಹುದಾಗಿದೆ ಎಂದ ಅವರು ನಾಟಕಕ್ಕೆ ಶುಭ ಕೋರಿದರು.

ಕರ್ನಾಟಕ ನಾಟಕ ಅಕಾಡೆಮಿ ಸದಸ್ಯ ಉಗಮ ಶ್ರೀನಿವಾಸ್ ಮಾತನಾಡಿ ನಾಟಕ ಅಕಾಡೆಮಿ ವತಿಯಿಂದ ಜಿಲ್ಲೆಯಲ್ಲಿ ಹಲವಾರು ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಈಗಾಗಲೇ ಹಾಸ್ಯ ಬ್ರಹ್ಮ ನರಸಿಂಹರಾಜು ನಾಟಕ, ಸಿದ್ಧಗಂಗಾ ಮಠದಲ್ಲಿ ಶರಣರ ನಾಟಕ, ತುಮಕೂರಿನ ಗುಬ್ಬಿ ವೀರಣ್ಣ ರಂಗಮಂದಿರದಲ್ಲಿ ಜಿಲ್ಲಾ ನಾಟಕೋತ್ಸವ ಸೇರಿದಂತೆ ಹಲವಾರು ಕಾರ್ಯಕ್ರಮಗಳನ್ನು ನಡೆಸಲಾಗಿದೆ ಎಂದರು. ರಂಗಕರ್ಮಿ ಎಸ್.ಎ. ಖಾನ್ ರಂಗಸಂದೇಶ ವಾಚಿಸಿದರು. ಬಳಿಕ ತುಮಕೂರು ವಿವಿ ಡಿವಿಜಿ ಅಧ್ಯಯನ ಮತ್ತು ಸಂಶೋಧನಾ ಸಂಸ್ಥೆಯಲ್ಲಿ ನಡೆದ ವಿಚಾರ ಸಂಕಿರಣದಲ್ಲಿ ಡಾ. ಅಣ್ಣಮ್ಮ, ನಾಗಭೂಷಣ ಬಗ್ಗನಡು ಪಾಲ್ಗೊಂಡಿದ್ದರು.

## ಸಣ್ ಸುದ್ದಿ

### ಮಾ.30ರಂದು ಮಹಾವೀರ ಜಯಂತಿ : ಮಾಂಸ ಮಾರಾಟ ನಿಷೇಧ

ತುಮಕೂರು: ಸರ್ಕಾರದ ಅಧಿಸೂಚನೆಯನ್ವಯ ಮಾರ್ಚ್ 30ರಂದು ಆಚರಿಸಲಾಗುವ ಮಹಾವೀರ ಜಯಂತಿ ಪ್ರಯುಕ್ತ ತುಮಕೂರು ಮಹಾನಗರಪಾಲಿಕೆ ವ್ಯಾಪ್ತಿಯಲ್ಲಿ ಮಾರ್ಚ್ 29ರ ಸಂಜೆ 5 ಗಂಟೆಯಿಂದ ಮಾರ್ಚ್ 30ರ ಮಧ್ಯರಾತ್ರಿ 12 ಗಂಟೆಯವರೆಗೆ ಮಾಂಸ ಮಾರಾಟ ನಿಷೇಧಿತ ದಿನವೆಂದು ಘೋಷಿಸಲಾಗಿದೆ.

ಈ ಅವಧಿಯಲ್ಲಿ ಕಸಾಯಿಖಾನೆ ಮುಚ್ಚಲು ಹಾಗೂ ಮಾಂಸ ಮಾರಾಟ ಮಾಡುವುದಾಗಲಿ, ಸಂಗ್ರಹಣೆ ಮಾಡುವುದನ್ನು ನಿಷೇಧಿಸಿದೆ ಎಂದು ಪಾಲಿಕೆಯ ಸಹಾಯಕ ಕಾರ್ಯಪಾಲಕ ಅಭಿಯಂತರರು(ಪರಿಸರ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಮಾ. 31ರಂದು ಎಸ್.ಎಸ್.ಎಲ್.ಸಿ. ಹಿಂದಿ ಪರೀಕ್ಷೆ

ತುಮಕೂರು: ಕರ್ನಾಟಕ ಶಾಲಾ ಪರೀಕ್ಷೆ ಮತ್ತು ಮೌಲ್ಯ ನಿರ್ಣಯ ಮಂಡಳಿಯು ಮಾರ್ಚ್ 30ರಂದು ನಡೆಯಬೇಕಿದ್ದ ಎಸ್.ಎಸ್.ಎಲ್.ಸಿ. ಹಿಂದಿ ತೃತೀಯ ಭಾಷೆ ಪರೀಕ್ಷೆಯನ್ನು ಮಾರ್ಚ್ 31ಕ್ಕೆ ಮುಂದೂಡಿ ನಿಗದಿಪಡಿಸಿದೆ ಎಂದು ಶಾಲಾ ಶಿಕ್ಷಣ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

ಸರ್ಕಾರದ ಆದೇಶದಂತೆ ಮಾರ್ಚ್ 31ರಂದು ಇದ್ದಂತಹ ಮಹಾವೀರ ಜಯಂತಿ ಆಚರಣೆಯ ಸಾರ್ವತ್ರಿಕ ರಜೆಯನ್ನು ಮಾರ್ಚ್ 30ಕ್ಕೆ ಆದೇಶಿಸಿರುವ ಹಿನ್ನೆಲೆಯಲ್ಲಿ ಹಿಂದಿ ಪರೀಕ್ಷೆಯನ್ನು ಮುಂದೂಡಲಾಗಿದೆ. ಹಿಂದಿ ತೃತೀಯ ಭಾಷೆ ಪರೀಕ್ಷೆಯು ಮಾರ್ಚ್ 31ಕ್ಕೆ ಮುಂದೂಡಲಾಗಿದ್ದು, ಉಳಿದಂತೆ ಪರೀಕ್ಷಾ ಕೇಂದ್ರ, ಪರೀಕ್ಷಾ ಸಮಯದಲ್ಲಿ ಯಾವುದೇ ರೀತಿಯ ಬದಲಾವಣೆ ಇರುವುದಿಲ್ಲವೆಂದು ಅವರು ತಿಳಿಸಿದ್ದಾರೆ.

### ವ್ಯಕ್ತಿ ಕಾಣೆ

ತುಮಕೂರ: ಕುಣಿಗಲ್ ತಾಲ್ಲೂಕು ಹುತ್ರಿದುರ್ಗ ಹೋಬಳಿ ಸೀಗೇಪಾಳ್ಯ ಗ್ರಾಮದ ಸುಮಾರು 48 ವರ್ಷದ ಲೋಕೇಶ್ ಎಂಬ ವ್ಯಕ್ತಿಯು ಫೆಬ್ರವರಿ 5ರಂದು ಕಾಣೆಯಾಗಿದ್ದಾನೆ ಎಂದು ಈತನ ಅಣ್ಣ ಚಂದ್ರಯ್ಯ ಕುಣಿಗಲ್ ಪೊಲೀಸ್ ಠಾಣೆಗೆ ದೂರು ನೀಡಿದ್ದಾರೆ.

ಈತನು 5.5 ಅಡಿ ಎತ್ತರ, ಎಣ್ಣೆಗೆಂಪು ಮೈಬಣ್ಣ, ಕೋಲು ಮುಖ, ಸಾಧಾರಣ ಮೈಕಟ್ಟು ಹೊಂದಿದ್ದು, ಕನ್ನಡ ಭಾಷೆ ಮಾತನಾಡುತ್ತಾನೆ. ಕಾಣೆಯಾದ ಸಂದರ್ಭದಲ್ಲಿ ಬಿಳಿ ಬಣ್ಣದ ಅಂಗಿ ಮತ್ತು ಪ್ಯಾಂಟ್ ಧರಿಸಿದ್ದನು.

ಕಾಣೆಯಾದವನ ಬಗ್ಗೆ ಸುಳಿವು ಸಿಕ್ಕಲ್ಲಿ ದೂ.ವಾ.ಸಂ. 08132–220229, 0816–22272451ನ್ನು ಸಂಪರ್ಕಿಸಬೇಕೆಂದು ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

### ಇಂದು ಶ್ರೀ ಸಿದ್ಧಾರ್ಥ ದಂತವೈದ್ಯಕೀಯ ಕಾಲೇಜಿನಲ್ಲಿ ಸೆಂಟರ್ ಫಾರ್ ಎಕ್ಸೆಲೆನ್ಸ್ ಕೇಂದ್ರ ಉದ್ಘಾಟನೆ

ತುಮಕೂರು: ಶ್ರೀ ಸಿದ್ಧಾರ್ಥ ದಂತವೈದ್ಯಕೀಯ ಮಹಾವಿದ್ಯಾಲಯದಲ್ಲಿ ಸೆಂಟರ್ ಫಾರ್ ಎಕ್ಸೆಲೆನ್ಸ್ ಕೇಂದ್ರವನ್ನು 28ರ ಮಾರ್ಚ್‌ರಂದು (ಇಂದು) ಸಾಹೇ ವಿವಿಯ ಕುಲಾಧಿಪತಿಗಳು ಹಾಗೂ ರಾಜ್ಯ ಸರ್ಕಾರದ ಗೃಹ ಮಂತ್ರಿಗಳಾದ ಡಾ.ಜಿ ಪರಮೇಶ್ವರ್ ಅವರು ಉದ್ಘಾಟಿಸಲಿದ್ದಾರೆ. ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಯಾಗಿ ರಾಜ್ಯ ಸರ್ಕಾರದ ಆರೋಗ್ಯ ಸಚಿವರಾದ ಶ್ರೀ ದಿನೇಶ್ ಗುಂಡೂರಾವ್ ಭಾಗವಹಿಸಲಿದ್ದಾರೆ. ಗೌರವಾನ್ವಿತ ಅತಿಥಿಯಾಗಿ ಮ್ಯಾನೇಜ್ಮೆಂಟ್ ಟ್ರಸ್ಟಿಗಳಾದ ಶ್ರೀಮತಿ ಕನ್ನಿಕಾ ಪರಮೇಶ್ವರಿ ಮತ್ತು ಡಾ. ಜಿ. ಎಸ್. ಆನಂದ್ ಮತ್ತು ಸಾಹೇ ವಿವಿಯ ಉಪಕುಲಪತಿಗಳಾದ ಡಾ.ಲಿಂಗೇಗೌಡರವರು ಭಾಗವಹಿಸಲಿದ್ದಾರೆ.

ಸಿದ್ಧಾರ್ಥ ದಂತ ಕಾಲೇಜಿನ ಪ್ರಾಂಶುಪಾಲರಾದ ಡಾ. ಪ್ರವೀಣ್ ಬಿ ಕುಡುವಾ ಅವರು ಸಿದ್ಧಾರ್ಥ ಶ್ರೇಷ್ಠತಾ ಕೇಂದ್ರ ಮತ್ತು ಶ್ರೇಷ್ಠತಾ ಕೇಂದ್ರದ ಮಹತ್ವವನ್ನು ತಿಳಿಸಲಿದ್ದಾರೆ . ವೈದ್ಯರು ಮತ್ತು ಫೋರೆನ್ಸಿಕ್ ಡೆಂಟಿಸ್ಟ್ರಿ, ಸ್ಪೋರ್ಟ್ಸ್ ಡೆಂಟಿಸ್ಟ್ರಿ, ಎಸ್ಥೆಟಿಕ್ ಡೆಂಟಿಸ್ಟ್ರಿಯಂತಹ ಹೊಸ ಕ್ಷೇತ್ರಗಳಲ್ಲಿ ವೈದ್ಯರು ಮತ್ತು ಸಂಶೋಧನೆಗೆ ಅಗತ್ಯವಿರುವ ಜ್ಞಾನ ಮತ್ತು ಕೌಶಲ್ಯಗಳನ್ನು ಸೇರಿಸುವಲ್ಲಿ ಅವರು ಪ್ರಮುಖ ಪಾತ್ರ ವಹಿಸಲಿದ್ದಾರೆ. ಹೊಸ ಎಸ್‌ಸಿಇಇ ಘಟಕವು ದಂತ ಇಂಪ್ಲಾಂಟ್ಗಳು, ಲೇಸರ್ ಡೆಂಟಿಸ್ಟ್ರಿ, ಕಾನ್ಷಿಯಸ್ ಸೆಡೇಶನ್ ಕ್ಷೇತ್ರದಲ್ಲಿ ಸುಧಾರಿತ ಕಾರ್ಯವಿಧಾನಗಳಿಗಾಗಿ ವೈದ್ಯರಿಗೆ ತರಬೇತಿ ನೀಡಲಿದೆ. ಈ ಮೂಲಕ ದಂತವೈದ್ಯರಿಗೆ ಕೌಶಲ್ಯ ಹೆಚ್ಚಿಸುವುದು ಮತ್ತು ಚಿಕಿತ್ಸಾ ಪ್ರೋಟೋಕಾಲ್ಗಳನ್ನು ಪರಿಷ್ಕರಿಸುವುದು ಎಸ್‌ಸಿಇಇಯ ಪ್ರಾಥಮಿಕ ಗುರಿಯಾಗಿದೆ.



ತುಮಕೂರಿನ ಶೆಟ್ಟಿಹಳ್ಳಿಗೇಟ್‌ನಲ್ಲಿರುವ ಶ್ರೀ ಅಭಯಾಂಜನೇಯಸ್ವಾಮಿ ದೇವಾಲಯದಲ್ಲಿ ಶ್ರೀರಾಮನವಮಿ ಪ್ರಯುಕ್ತ ಹಮ್ಮಿಕೊಂಡಿದ್ದ ವಿಶೇಷ ಪೂಜಾ ಕೈಂಕರ್ಯದಲ್ಲಿ ಶಾಸಕ ಜ್ಯೋತಿಗಣೇಶ್, ದೇವಾಲಯದ ಸಮಿತಿ ಅಧ್ಯಕ್ಷರಾದ ಕೃಷ್ಣಸ್ವಾಮಿ ನಾಯ್ಡು, ಕಾರ್ಯಾಧ್ಯಕ್ಷರಾದ ಆರಾಧ್ಯ ಮಂಚಲದೊರೆ, ಖಜಾಂಚಿ ಗಂಗಾ ಮೆಡಿಕಲ್ ಮಂಜಣ್ಣ, ಕಾರ್ಯದರ್ಶಿ ಶ್ರೀನಿವಾಸ್‌ಗೌಡ, ದೇವಾಲಯದ ನಿರ್ದೇಶಕರುಗಳಾದ ಕೇಬಲ್ ರಾಜು, ರಾಜಶೇಖರ್, ರಂಗನಾಥ್, ಶ್ರೀನಿವಾಸ್, ಉಪಾಧ್ಯಕ್ಷರಾದ ಚಂದ್ರಣ್ಣ ಹಾಗೂ ಬಡಾವಣೆಯ ಮುಖಂಡರು ಪಾಲ್ಗೊಂಡಿದ್ದರು.

## ಏ.15 ರಿಂದ 15 ದಿನಗಳ 'ಬೇಸಿಗೆ ಶಿಬಿರ': ನೋಂದಣಿಗೆ ಏಪ್ರಿಲ್ 9 ಕಡೆ ದಿನ

ತುಮಕೂರು: ಜಿಲ್ಲಾ ಬಾಲಭವನ ಸಮಿತಿ ವತಿಯಿಂದ 2026–27ನೇ ಸಾಲಿನಲ್ಲಿ 5 ರಿಂದ 16ರ ವಯೋಮಾನದ ಮಕ್ಕಳಿಗಾಗಿ ಏಪ್ರಿಲ್ 15 ರಿಂದ 29ರವರೆಗೆ ಪ್ರತಿ ದಿನ ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆ 15 ದಿನಗಳ "ಬೇಸಿಗೆ ಶಿಬಿರ"ವನ್ನು ಆಯೋಜಿಸಲಾಗಿದೆ.

ಆಸಕ್ತ ಪಾಲಕರು ಏಪ್ರಿಲ್ 9ರೊಳಗೆ ಜಿಲ್ಲಾ ಬಾಲಭವನ ಕಚೇರಿ, ಎಂ.ಜಿ. ರಸ್ತೆ, ತುಮಕೂರು ಇಲ್ಲಿ ಕಚೇರಿ ವೇಳೆಯಲ್ಲಿ ತಮ್ಮ ಮಕ್ಕಳ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಶಿಬಿರದಲ್ಲಿ 60 ಮಕ್ಕಳು ಮಾತ್ರ ಭಾಗವಹಿಸಲು ಅವಕಾಶವಿರುವುದರಿಂದ ಮೊದಲು ನೋಂದಾಯಿಸಿಕೊಂಡವರಿಗೆ ಮಾತ್ರ ಆದ್ಯತೆ ನೀಡಲಾಗುವುದಲ್ಲದೇ, ಅಗತ್ಯ ಸಂಖ್ಯೆ ಮೀರಿ ನೋಂದಾಯಿಸಿಕೊಳ್ಳುವುದಿಲ್ಲ.

ಸರ್ಕಾರಿ ಶಾಲಾ ಮಕ್ಕಳು, ಗ್ರಾಮೀಣ/ಹೋಬಳಿ ಮಟ್ಟದ ಮತ್ತು ಸೌಲಭ್ಯ ವಂಚಿತ ಮಕ್ಕಳಿಗೆ, ಸರ್ಕಾರಿ ಸುಧಾರಣಾ ಸಂಸ್ಥೆಗಳ ಬಾಲಕ/ಬಾಲಕಿಯರ ಬಾಲ ಮಂದಿರದ ಮಕ್ಕಳಿಗೆ ಹಾಗೂ ವಿಕಲಚೇತನ ಮಕ್ಕಳಿಗೆ ಬೇಸಿಗೆ ಶಿಬಿರದಲ್ಲಿ ವಿಶೇಷ ಆದ್ಯತೆ ನೀಡಲಾಗಿದೆ. ಹೆಚ್ಚಿನ ವಿವರಗಳಿಗೆ ಸಂಚಾರಿ ದೂರವಾಣಿ ಸಂಖ್ಯೆ 9901890079ನ್ನು ಸಂಪರ್ಕಿಸಬಹುದಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



ತುಮಕೂರಿನಕ್ಯಾತ್ಸಂದ್ರ ಪೊಲೀಸ್ ವೃತ್ತದ ವೃತ್ತ ನಿರೀಕ್ಷಕರಾದಕೆ. ಆರ್.ರಾಘವೇಂದ್ರಅವರ ಹುಟ್ಟು ಹಬ್ಬದ ಅಂಗವಾಗಿ ಕನ್ನಡ ಸೇನೆ ಜಿಲ್ಲಾಘಟಕದಿಂದ ಶುಕ್ರವಾರ ವಿಕಲಚೇತನರಿಗೆ ವ್ಹೀಲ್‌ಚೇರ್ ವಿತರಣೆ ಮಾಡಲಾಯಿತು.ಇದೇ ಸಂದರ್ಭದಲ್ಲಿಕನ್ನಡ ಸೇನೆ ಜಿಲ್ಲಾಧ್ಯಕ್ಷಧನಿಯಾಕುಮಾರ್ ಹಾಗೂ ಪದಾಧಿಕಾರಿಗಳು ಸರ್ಕಲ್‌ಇನ್ಸ್‌ಪೆಕ್ಟರ್‌ರಾಘವೇಂದ್ರಅವರನ್ನು ಸನ್ಮಾನಿಸಿ ಹುಟ್ಟುಹಬ್ಬದ ಶುಭಾಶಯ ಸಲ್ಲಿಸಿದರು. ಈ ವೇಳೆ ಕನ್ನಡ ಸೇನೆ ನಗರಅಧ್ಯಕ್ಷಜೆ.ವಿಠಲ್, ಮುಖಂಡರಾದಗುರುರಾಘವೇಂದ್ರ, ರಾಮಚಂದ್ರರಾವ್, ಶಬ್ಬೀರ್‌ಅಹ್ಮದ್, ಮುನ್ನಾ ಮೊದಲಾದವರು ಹಾಜರಿದ್ದರು.



ತುಮಕೂರು : ನಗರದ ಜಿಲ್ಲಾಧಿಕಾರಿಗಳ ಕಛೇರಿ ಹಿಂಭಾಗದಲ್ಲಿರುವ ಶ್ರೀ ಅರಳೀಕಟ್ಟೆ ಚಾರಿಟಬಲ್ ಟ್ರಸ್ಟ್ ವತಿಯಿಂದ ಶ್ರೀರಾಮನವಮಿ ಹಬ್ಬದ ಪ್ರಯುಕ್ತ ಸಾರ್ವಜನಿಕರಿಗೆ ಪುಳಿಯೋಗರೆ, ಮೊಸರನ್ನ, ಫಲಹಾರ, ಮಜ್ಜಿಗೆ, ಪಾನಕ ವಿತರಣೆಯನ್ನು ಮಾಡಿದ್ದು, ಈ ಒಂದು ಕಾರ್ಯವನ್ನು ಕಳೆದ 26 ವರ್ಷಗಳಿಂದ ಮಾಡಿಕೊಂಡು ಬರುತ್ತಿದ್ದು ಪ್ರತೀ ವರ್ಷದಂತೆ ಈ ವರ್ಷವೂ ಸಹ ಅಕ್ಕ ಪಕ್ಕದ ವರ್ತಕರುಗಳು ಮತ್ತು ಆಟೋ ಚಾಲಕರುಗಳ ಸಹಕಾರದಿಂದ ಈ ಒಂದು ಕಾರ್ಯವನ್ನು ನೆರವೇರಿಸಲಾಯಿತು ಎಂದು ಟ್ರಸ್ಟ್ ನ ಅಧ್ಯಕ್ಷರಾದ ಕುಮಾರ್ ತಿಳಿಸಿದರು. ಈ ಸಂದರ್ಭದಲ್ಲಿ ಉಪಾಧ್ಯಕ್ಷರಾದ ನರೇಂದ್ರ ಪ್ರಭು, ಕಾರ್ಯದರ್ಶಿ ರಾಜಣ್ಣ, ತಿಪ್ಪೇರುದ್ರಪ್ಪ, ರಮೇಶಣ್ಣ, ತಮ್ಮಯ್ಯ, ಮಂಜಣ್ಣ, ರಮೇಶ್, ಲೋಕೇಶ್, ಕೃಷ್ಣಪ್ಪ ಸೇರಿದಂತೆ ಇನ್ನಿತರರು ಉಪಸ್ಥಿತರಿದ್ದರು.

EDITOR: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRINTED BY: T.S.KRISHNAMURTHY, ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA. OWNED BY: RAVI KUMAR.C.H, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA PRNTED AT: ANJANADRI PRINTERS, 4th CROSS, VINAYAKA NAGARA, TUMAKURU-572101. KARNATAKA, PUBLISHED AT: TUMAKURU, CHIMPUGANAHALLI (VILLEGE), KODALAHALLI (POST), KORATGERE TALUK - 572121, TUMAKURU DISTRICT, KARNATAKA . SUB EDITOR- A.S.BANUPRAKASH CONTACT : 9901010109 GMAIL: suryapragathi2021@gmail.com.